ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 131

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 30-04-2026

## ರಾಜ್ಯದಲ್ಲಿ ಮಿತಿಮೀರಿದ ಡ್ರಗ್ಸ್ ಹಾವಳಿ ಮಟ್ಟಹಾಕುವಂತೆ ಪೊಲೀಸರಿಗೆ ಪರಮೇಶ್ವರ್ ಸೂಚನೆ

**ಬೆಂಗಳೂರು,ಏ.29**–ಒಂದು ದಿನವಾದರೂ ರಾಜ್ಯದಲ್ಲಿ ಡ್ರಗ್ಸ್ ಸಿಗದ ರೀತಿ ಪೊಲೀಸರು ಕರ್ತವ್ಯ ನಿರ್ವಹಿಸಬೇಕೆಂದು ಈಗಾಗಲೇ ಪೊಲೀಸರಿಗೆ ತಿಳಿಸಿದ್ದೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದರು.

ಪೊಲೀಸ್ ಆಯುಕ್ತರ ಕಚೇರಿಯಲ್ಲಿ ನಗರ ಪೊಲೀಸರು ವಶಪಡಿಸಿಕೊಂಡಿರುವ ಡ್ರಗ್ಸ್ ಬಗ್ಗೆ ವಿವರಿಸಿ ಮಾತನಾಡಿದ ಅವರು, ಒಂದು ದಿನವಾದರೂ ಸಹ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಡ್ರಗ್ಸ್ ಸಿಗದಂತೆ ಕರ್ತವ್ಯ ನಿರ್ವಹಿಸಲು ಸೂಚಿಸಿದ್ದೇವೆ ಎಂದರು.

ಡ್ರಗ್ಸ್ ಸಾಗಾಟ, ಉತ್ಪಾದನೆ ಮತ್ತು ಉಪಯೋಗ ಈ ಮೂರು ವಿಷಯಗಳ ಬಗ್ಗೆ ಗಮನಹರಿಸಬೇಕೆಂದು ಪೊಲೀಸರಿಗೆ ತಿಳಿಸಿದ್ದೇವೆ. ಆ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ನಮ್ಮ ಸರ್ಕಾರ ಬಂದ ನಂತರ ಡ್ರಗ್ಸ್ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ



ಕೆಲಸ ಮಾಡುತ್ತಿದ್ದಾರೆ. ಅದಕ್ಕಾಗಿ ಟಾಸ್ಕ್‌ಫೋರ್ಸ್ ರಚಿಸಲಾಗಿದೆ. ಅದು ಸಹ ಉತ್ತಮವಾಗಿ ಕೆಲಸ ಮಾಡುತ್ತಿದೆ ಎಂದು ಅವರು ವಿವರಿಸಿದರು.

ಡ್ರಗ್ಸ್ ನಿಂದ ಅಮಾಯಕರು ಬಲಿಯಾಗುತ್ತಿದ್ದಾರೆ. ಅದನ್ನು ತಪ್ಪಿಸಬೇಕು. ಡ್ರಗ್ಸ್ ಬಗ್ಗೆ ಶಾಲಾ ಕಾಲೇಜುಗಳಿಗೆ ಪೊಲೀಸರು ಹೋಗಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ ತಿಳುವಳಿಕೆ ನೀಡುತ್ತಿದ್ದಾರೆ. ಕಳೆದ ಒಂದು ವರ್ಷದಿಂದ ಈ ಕೆಲಸ ಮಾಡುತ್ತಿದ್ದು, ಯಶಸ್ಸು ಕಂಡು ಬಂದಿದೆ ಎಂದು ಹೇಳಿದರು.

ಬೆಂಗಳೂರು ನಗರ ಸೇರಿದಂತೆ ರಾಜ್ಯದಲ್ಲಿ ಡ್ರಗ್ಸ್ ನಿರ್ಮೂಲನೆಗೆ ಪಣತೊಟ್ಟಿದ್ದು ಆ ನಿಟ್ಟಿನಲ್ಲಿ ಪೊಲೀಸರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದರು.

**ಉತ್ತಮ ಬಂದೋಬಸ್ತ್:** ನಗರದಲ್ಲಿ ಇದುವರೆಗೂ ಐದು ಐಪಿಎಲ್ ಕ್ರಿಕೆಟ್ ಪಂದ್ಯಾವಳಿಗಳು ನಡೆದಿದ್ದು, ಪೊಲೀಸರು ಉತ್ತಮವಾಗಿ ಬಂದೋಬಸ್ತ್ ಮಾಡಿದ್ದರು. ಬಂದೋಬಸ್ತ್ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿ ಮುಂಬೈ, ಹೈದರಾಬಾದ್, ದೆಹಲಿ ಪೊಲೀಸರು ಸಹ ಇಲ್ಲಿಗೆ ಬಂದು ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡಿ ಉತ್ತಮ ರೀತಿಯಲ್ಲಿ ಬಂದೋಬಸ್ತ್ ಮಾಡಿದ್ದ ಬಗ್ಗೆ ಮಾಹಿತಿ ಪಡೆದುಕೊಂಡಿದ್ದಾರೆಂದು ಇದೇ ವೇಳೆ ಸಚಿವರು ತಿಳಿಸಿದರು.

## ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಶೇ.100ರಷ್ಟು ಫಲಿತಾಂಶ

ಧೈರ್ಯದ ದಾರಿ







**ರಾಯಚೂರು:** ರಾಯಚೂರಿನ ಆಶಾಪೂರು ರಸ್ತೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.100 ರಷ್ಟು ಫಲಿತಾಂಶ ಸಾಧಿಸಿದೆ. ಪರೀಕ್ಷೆಗೆ ಹಾಜರಾದ 48 ವಿದ್ಯಾರ್ಥಿಗಳಲ್ಲಿ 14 ಜನ ಅಗ್ರಶ್ರೇಣಿ, 29 ಪ್ರಥಮ ದರ್ಜೆ, 04 ಜನ ದ್ವಿತೀಯ ದರ್ಜೆ ಹಾಗೂ ಒಬ್ಬ ವಿದ್ಯಾರ್ಥಿ ಪಾಸರಾಗಿರುತ್ತಾರೆ.
ಶಾಲೆಯ ವಿದ್ಯಾರ್ಥಿ ಕು. ನಂದಿನಿ ಅವರು ಶೇ.95.84 ಪ್ರಥಮ ಸ್ಥಾನ, ಕು.ಭಾಗ್ಯಶ್ರೀ ಶೇ.94.40 ದ್ವಿತೀಯಾ ಸ್ಥಾನ ಹಾಗೂ ಕು.ಅನಿಲ್ ಶೇ.93.76 ತೃತೀಯ ಸ್ಥಾನ ಪಡೆದಿದ್ದು, ಈ ಸಾಧನೆಗೆ ವಿದ್ಯಾರ್ಥಿಗಳು, ಪಾಲಕರು, ಪ್ರಾಂಶುಪಾಲರು, ನಿಲಯ ಪಾಲಕರು, ಭೋದಕ & ಭೋದಕೇತರ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿರುತ್ತಾರೆ ಎಂದು ಶಾಲೆಯ ಪ್ರಾಂಶುಪಾಲರಾದ ಕಲ್ಪನಾ ಎಸ್ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಟ್ಟಣ ಪಂಚಾಯತ್ ಪ್ರಭಾರಿ ಮುಖ್ಯಾಧಿಕಾರಿಯಾಗಿ ತಹಶೀಲ್ದಾರ್ ಅಶೋಕ್ ಪವಾರ್ ಅಧಿಕಾರ ಸ್ವೀಕಾರ

ಧೈರ್ಯದ ದಾರಿ

**ಸಿರವಾರ:** ಪಟ್ಟಣ ಪಂಚಾಯತ್‌ನ ನೂತನ ಪ್ರಭಾರಿ ಮುಖ್ಯಾಧಿಕಾರಿಗಳಾಗಿ ಸ್ಥಳೀಯ ತಹಶೀಲ್ದಾರ್ ಅಶೋಕ್ ಪವಾರ್ ಅವರು ಅಧಿಕಾರ ವಹಿಸಿಕೊಂಡರು. ಆಡಳಿತಾತ್ಮಕ ಹಿತದೃಷ್ಟಿಯಿಂದ ಪಟ್ಟಣ ಪಂಚಾಯತ್‌ನ ಹೆಚ್ಚುವರಿ ಜವಾಬ್ದಾರಿಯನ್ನು ಅವರು ಹಿರಿಯ ಅಧಿಕಾರಿಗಳ ಸೂಚನೆಯಂತೆ ವಹಿಸಿಕೊಂಡಿದ್ದಾರೆ.

ಸದಸ್ಯರಿಂದ ಆತ್ಮೀಯ ಸನ್ಮಾನ

ತಹಶೀಲ್ದಾರ್ ಅಶೋಕ್ ಪವಾರ್ ಅವರು ಪ್ರಭಾರಿ ಮುಖ್ಯಾಧಿಕಾರಿಗಳಾಗಿ ಅಧಿಕಾರ ಸ್ವೀಕರಿಸಿದ ಹಿನ್ನೆಲೆಯಲ್ಲಿ, ಪಟ್ಟಣ ಪಂಚಾಯತ್ ಸದಸ್ಯರು ಅವರನ್ನು ಕಚೇರಿಯಲ್ಲಿ ಭೇಟಿ ಮಾಡಿ ಗೌರವಿಸಿದರು. ಸದಸ್ಯರಾದ ಮೌಲಾಸಾಬ್ ವರ್ಚಸ್ ಹಾಗೂ ಮಾರ್ಕಂಡಪ್ಪ ಅವರು ನೂತನ ಮುಖ್ಯಾಧಿಕಾರಿಗಳಿಗೆ ಹೂಮಾಲೆ ಹಾಕಿ, ಶಾಲು ಹೊದಿಸಿ ಸನ್ಮಾನಿಸುವ ಮೂಲಕ ಆತ್ಮೀಯವಾಗಿ ಬರಮಾಡಿಕೊಂಡರು.

ಅಭಿವೃದ್ಧಿಗೆ ಸಹಕಾರದ ಆಶಯ

ಸನ್ಮಾನದ ನಂತರ ಮಾತನಾಡಿದ ಸದಸ್ಯರು, "ತಹಶೀಲ್ದಾರರಾದ ಅಶೋಕ್ ಪವಾರ್ ಅವರ ಅನುಭವ ಮತ್ತು ಮಾರ್ಗದರ್ಶನದಲ್ಲಿ




ಪಟ್ಟಣದ ಬಾಕಿ ಇರುವ ಅಭಿವೃದ್ಧಿ ಕಾಮಗಾರಿಗಳು ವೇಗ ಪಡೆಯಲಿವೆ. ಪಟ್ಟಣದ ಸ್ವಚ್ಛತೆ, ಕುಡಿಯುವ ನೀರು ಮತ್ತು ಮೂಲಸೌಕರ್ಯಗಳ ಸುಧಾರಣೆಗೆ ನಾವು ಪೂರ್ಣ ಸಹಕಾರ ನೀಡುತ್ತೇವೆ," ಎಂದು ತಿಳಿಸಿದರು.
ಅಧಿಕಾರ ಸ್ವೀಕರಿಸಿದ ಅಶೋಕ್ ಪವಾರ್ ಅವರು ಮಾತನಾಡಿ, ಶಾಸನಬದ್ಧವಾಗಿ ಪಟ್ಟಣದ ಪ್ರಗತಿಗೆ ಶ್ರಮಿಸುವುದಾಗಿ ಮತ್ತು ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವುದಾಗಿ ಭರವಸೆ ನೀಡಿದರು.
ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್‌ನ ಸಿಬ್ಬಂದಿ ಹಾಗೂ ಪ್ರಮುಖರು ಉಪಸ್ಥಿತರಿದ್ದರು.

## ಧಾರಾಕಾರ ಮಳೆಗೆ ಬೌರಿಂಗ್ ಆಸ್ಪತ್ರೆ ಗೋಡೆ ಕುಸಿದು 8 ಮಂದಿ ದುರ್ಮರಣ



**ಬೆಂಗಳೂರು, ಏ.29**– ಬೆಂಗಳೂರಿನಲ್ಲಿ ಇಂದು ಸರಿದ ಇಂದು ಸಂಜೆ ಸುರಿದ ಧಾರಾಕಾರ ಮಳೆಯಿಂದಾಗಿ ಬೌರಿಂಗ್ ಆಸ್ಪತ್ರೆಯ ಗೋಡೆ ಕುಸಿದು ಏಳು ಮಂದಿ ದುರಂತ ಸಾವಿಗೀಡಾಗಿದ್ದಾರೆ. ಈ ಘೋರ ದುರಂತದಲ್ಲಿ ಮ ಈ ಮೂವರು ಮಕ್ಕಳು ಸೇರಿದ್ದಾರೆ. 2ನೇಪುಟಕ್ಕೆ

## ಕನ್ನಡ ಸೇನೆ ಕರ್ನಾಟಕದ ಮಾನ್ವಿ ನಗರ ಘಟಕಕ್ಕೆ ಹೊಸ ಪದಾಧಿಕಾರಿಗಳ ಆಯ್ಕೆ



ಧೈರ್ಯದ ದಾರಿ

**ಮಾನ್ವಿ :** ಕನ್ನಡ ಸೇನೆ ಕರ್ನಾಟಕ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ನಗರ ಘಟಕಕ್ಕೆ ಹೊಸದಾಗಿ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾ ಅಧ್ಯಕ್ಷ ಎಮ್. ಬಸವರಾಜ್ ಮರ್ಕಂದಿನ್ನಿ ಹೇಳಿದರು. ಸಂಘಟನೆಯ ವಿಸ್ತರಣೆ ಹಾಗೂ ಯುವಕರಿಗೆ ಜವಾಬ್ದಾರಿ ನೀಡುವ ನಿಟ್ಟಿನಲ್ಲಿ ಈ ನೇಮಕಾತಿ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ತಾಲೂಕು ಅಧ್ಯಕ್ಷ ಬಸವರಾಜ್ ಮೈಲಾರಿ ಅವರ ನೇತೃತ್ವದಲ್ಲಿ, ನಗರ ಘಟಕದ ಅಧ್ಯಕ್ಷ ಶೇಖ್ ಮುಸ್ತಫ ಹಾಗೂ ಪ್ರಧಾನ ಕಾರ್ಯದರ್ಶಿ ಶಿವಾನಂದ ನಾಯಕ ಅವರ ಮಾರ್ಗದರ್ಶನದಲ್ಲಿ ಹೊಸ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಸಂಘಟನೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ನೇಮಕಗೊಂಡ ಪದಾಧಿಕಾರಿಗಳು: ನಗರ ಉಪಾಧ್ಯಕ್ಷರಾಗಿ ಶರಣಬಸವ, ನಜೀರ್ ಬಾಲನಗರ, ಪ್ರಭು, ಶಾಹಿದ್, ಪ್ರಧಾನ ಕಾರ್ಯದರ್ಶಿಯಾಗಿ ಶಿವು, ಕಾರ್ಯದರ್ಶಿಯಾಗಿ ವಾಹಿದ್, ವಾರ್ಡ್ ಅಧ್ಯಕ್ಷರಾಗಿ ವಾಹಿದ್ ಪಾಷಾ, ಮಹಮ್ಮದ್ ಜಾಫರ್, ಶಬ್ಬೀರ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಮಹಮ್ಮದ್ ಗೌಸ್ ಉಪಸ್ಥಿತರಿದ್ದರು.

## ಜಿಲ್ಲಾಡಳಿತದಿಂದ ಮೇ.01ರಂದು ಭಗವಾನ್ ಬುದ್ಧರ 2,570ನೇ ಜಯಂತಿ

ಧೈರ್ಯದ ದಾರಿ

**ರಾಯಚೂರು:** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಭಗವಾನ್ ಬುದ್ಧರ 2570ನೇ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮೇ.01ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. 2ನೇಪುಟಕ್ಕೆ

## ಪಾರದರ್ಶಕ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ:ಎಡಿಸಿ ಶಿವಾನಂದ

ಧೈರ್ಯದ ದಾರಿ

**ರಾಯಚೂರು:** ಮೇ.3ರಂದು ರಾಯಚೂರು ನಗರದ 11 ಪರೀಕ್ಷಾ ಕೇಂದ್ರಗಳಲ್ಲಿ ನೀಟ್–ಯುಜಿ ಪರೀಕ್ಷೆ–2026 ಜರುಗಲಿದ್ದು, ಪಾರದರ್ಶಕವಾಗಿ ಹಾಗೂ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.




ಏಪ್ರಿಲ್ 29ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ವಿಡಿಯೋ ಕಾನ್ಫರೇನ್ಸ್ ಸಭಾಂಗಣದಲ್ಲಿ ಜರುಗಿದ ನೀಟ್ ಪರೀಕ್ಷಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಎಲ್ಲರೂ ಪರೀಕ್ಷಾ ಮಾರ್ಗಸೂಚಿಗಳನ್ನು ಪಾಲಿಸಬೇಕು. ನೀಟ್ ಪರೀಕ್ಷೆ ಬಹಳ ಸೂಕ್ಷ್ಮವಾಗಿದೆ. ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಲಾದ ಅಧಿಕಾರಿಗಳು, ಮಾರ್ಗಾಧಿಕಾರಿಗಳು, ವೀಕ್ಷಕರು, ಕೊಠಡಿ ಮೇಲ್ವಿಚಾರಕರು ತಮ್ಮ ಕರ್ತವ್ಯಗಳಲ್ಲಿ ಯಾವುದೇ ಲೋಪವಾಗದಂತೆ ಜವಾಬ್ದಾರಿಯಿಂದ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು. ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತಗೊಂಡ ಅಧಿಕಾರಿಗಳು, ಉಪನ್ಯಾಸಕರು ಪರೀಕ್ಷಾ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕೊಠಡಿಯ ಒಳಗೆ ಶಿಸ್ತುಬದ್ಧವಾಗಿ ಪರೀಕ್ಷಾ ಪ್ರಾಧಿಕಾರದ ನಿಯಮಗಳ ಉಲ್ಲಂಘನೆಯಾಗದಂತೆ ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದರು.

**ಎಲೆಕ್ಟ್ರಾನಿಕ್ ಉಪಕರಣಗಳ ನಿಷೇಧ:** ಪರೀಕ್ಷಾರ್ಥಿಗಳು ಹಾಗೂ ಕೊಠಡಿಯ ಮೇಲ್ವಿಚಾರಕರಾಗಲಿ ಪರೀಕ್ಷಾ ಕೇಂದ್ರದೊಳಗೆ ಅತ್ಯಾಧುನಿಕ ಎಲೆಕ್ಟ್ರಾನಿಕ್ ಉಪಕರಣಗಳಾದ ಮೊಬೈಲ್, ಬ್ಲೂಟೂತ್, ಇಯರ್ ಫೋನ್‌ಗಳು, ಮೈಕ್ರೋಫೋನ್, ಕ್ಯಾಲಕ್ಯುಲೇಟರ್ ಹಾಗೂ ಗಡಿಯಾರಗಳನ್ನು ನಿಷೇಧಿಸಲಾಗಿದ್ದು, ಈ ಕುರಿತಂತೆ ಅಧಿಕಾರಿಗಳು ಎಚ್ಚರವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.
ಸಿಸಿ ಟಿವಿ–ಜಾಮರ್: ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಅಳವಡಿಕೆ, ಜಾಮರ್ ಹಾಗೂ ಕೊಠಡಿಯೊಳಗೆ ಗಡಿಯಾರ ಅಳವಡಿಕೆ ಕಡ್ಡಾಯವಾಗಿದೆ. ಪರೀಕ್ಷಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಗಾಳಿ, ಬೆಳಕು, ಸೂಕ್ತ ಪೀಠೋಪಕರಣ ಒಳಗೊಂಡಂತೆ ಮೂಲಭೂತ ಸೌಕರ್ಯ ಒದಗಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾರ್ಥಿಗಳ ತಪಾಸಣಾ ಕಾರ್ಯಕ್ಕೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕೈಗೊಳ್ಳಬೇಕು ಎಂದು ರಾಯಚೂರಿನ ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾರಾದ ದೀಪಾಶ್ರೀ ಅವರು ಸಭೆಗೆ ಮಾಹಿತಿ ನೀಡಿದರು.

**11 ಪರೀಕ್ಷಾ ಕೇಂದ್ರಗಳು:** ನೀಟ್ ಪರೀಕ್ಷೆಗೆ ಜಿಲ್ಲೆಯಲ್ಲಿ 3,744 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಲಾಗಿದ್ದು, ರಾಯಚೂರು ನಗರದ 11 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ. ಮೇ.03ರ ಮಧ್ಯಾಹ್ನ 2 ರಿಂದ ಸಂಜೆ 5ಗಂಟೆಯವರೆಗೆ ಪರೀಕ್ಷೆ ನಡೆಯಲಿದ್ದು, ಪರೀಕ್ಷೆ ಕೇಂದ್ರಕ್ಕೆ ವಿದ್ಯಾರ್ಥಿಗಳು ಅಂದು ಬೆಳಿಗ್ಗೆ 11 ರಿಂದ 1.30ರೊಳಗಾಗಿ ಹಾಜರಾಗಬೇಕೆಂದು ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾರು ಅವರು ತಿಳಿಸಿದರು. 2ನೇಪುಟಕ್ಕೆ

ಮೊದಲನೇ ಪುಟದಿಂದ

# ಜಿಲ್ಲಾಡಳಿತದಿಂದ ಮೇ.01ರಂದು ಭಗವಾನ್ ಬುದ್ಧರ 2,570ನೇ ಜಯಂತಿ

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಸಿದ್ಧಾರ್ಥ ಬುದ್ಧ ವಿಹಾರ ಸಮಿತಿಯ ಅಧ್ಯಕ್ಷ ಆರ್.ರವಿಕುಮಾರ ರಾಂಪೂರು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ರಾಯಚೂರು ತಾಲೂಕಿನ ಶಕ್ತಿನಗರದ ಕೆಪಿಸಿಎಲ್, ಪಂ.ಜಾತಿ/ ಪಂ.ವರ್ಗದ ನೌಕರರ ಸಂಘದ ಅಧ್ಯಕ್ಷ ಗೌತಮ ಕಟ್ಟಿಮನಿ ಅವರು ಭಗವಾನ್ ಬುದ್ಧರ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾರದರ್ಶಕ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ:ಎಡಿಸಿ ಶಿವಾನಂದ

ಇದೇ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗದ ನಿಯಂತ್ರಣಾಧಿಕಾರಿ ಚಂದ್ರಶೇಖರ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವೀರೇಶ ನಾಯಕ, ಕೇಂದ್ರೀಯ ವಿದ್ಯಾಲಯದ ಶಿಕ್ಷಕ ಪವನ ಪಾಂಡೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೋಕ್ರಾಣಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಡಿ.ಬಡಿಗೇರ, ಯರಮರಸ್ ಅದರ್ಶ ವಿದ್ಯಾಲಯದ ಪ್ರಾಂಶುಪಾಲ ಮಹಮದ್ ಅಬ್ದುಲ್ ಯಾನಿಸಿ, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಶ್ರೀದೇವಿ, ರಾಯಚೂರಿನ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ವೆಂಕಣ್ಣ, ಉಪನ್ಯಾಸಕ ರವಿ ಮೇಸ್ತ್ರಿ ಸೇರಿದಂತೆ ವಿವಿಯ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು ಸಭೆಯಲ್ಲಿ ಇದ್ದರು.

# ಧಾರಾಕಾರ ಮಳೆಗೆ ಬೌರಿಂಗ್ ಆಸ್ಪತ್ರೆ ಗೋಡೆ ಕುಸಿದು 8 ಮಂದಿ ದುರ್ಮರಣ

ಏಕಾಏಕಿ ಗೋಡೆ ಕುಸಿಯುತ್ತಿದ್ದಂತೆ ಆತಂಕದ ವಾತಾವರಣ ನಿರ್ಮಾಣ ವಾಯಿತು. ಸಾರ್ವಜನಿಕರು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದರಾದರೂ ಜನರ ಪ್ರಾಣಿ ಪಕ್ಷಿ ಹಾರಿಹೋಗಿತ್ತು. ಮೃತರೆಲ್ಲರೂ ಬೀದಿ ಬದಿಯ ವ್ಯಾಪಾರಿಗಳೆಂದು ಗುರುತಿಸಲಾಗಿದೆ. 50 ಮೀಟರ್ ಉದ್ದದ ಗೋಡೆ ಕುಸಿದು ಈ ಅವಘಡ ಸಂಭವಿಸಿದೆ.

ಸುದ್ದಿ ತಿಳಿಯುತ್ತಿದ್ದಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಭೇಟಿ ನೀಡಿ ಪರಿಶೀಲಿಸಿದರು. ಪರಿಹಾರ ತಂಡ ಅವಶೇಷಗಳನ್ನು ತೆರವುಗೊಳಿಸಲಾಯಿತು.

ಹಳೆಯ ಗೋಡೆಗೆ ದೊಡ್ಡ ಟಾರ್ಪಲ್ ಹಾಕಿ ವ್ಯಾಪಾರ ಮಾಡುತ್ತಿದ್ದರು. ದಿಢೀರನೆ ಮಳೆ ಜೋರಾಗಿ ಸುರಿದ ಕಾರಣ ರಕ್ಷಣೆಗೆ ವ್ಯಾಪಾರಿಗಳು ಮತ್ತು ಪಾದಚಾರಿಗಳು ಟಾರ್ಪಲ್ ಆಡಿ ನಿಂತಿದ್ದಾರೆ. ಈ ವೇಳೆ ಬಿರುಗಾಳಿ ಸಹಿತ ಮಳೆಗೆ ಗೋಡೆ ಕುಸಿದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ತಮ್ಮವರನ್ನು ಕಳೆದುಕೊಂಡ ಕುಟುಂಬಸ್ಥರ ರೋಧನ ಮುಗಿಲುಮುಟ್ಟಿದೆ.

# ಕೆಂಪೇಗೌಡರು ಇಡೀ ಮನುಕುಲದ ಉದ್ಧಾರಕ

**ಮೈಸೂರು: ಏ.30:–** ಕೆಂಪೇಗೌಡರು ಕೇವಲ ಒಕ್ಕಲಿಗ ಸಮುದಾಯಕ್ಕೆ ಸೀಮಿತವಾಗದೆ ಇಡೀ ಮನುಕುಲದ ಉದ್ಧಾರಕರಾಗಿದ್ದಾರೆ ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ಮೈಸೂರು ತಾಲೂಕಿನ ಲಲಿತಾದ್ರಿಪುರದಲ್ಲಿ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದಿಂದ ಆಯೋಜಿಸಿದ್ದ ಕೆಂಪೇಗೌಡರ ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದ ಅವರು, ಇದೊಂದು ವಿಶೇಷ ಕಾರ್ಯಕ್ರಮ. ನಾಡಪ್ರಭು ಕೆಂಪೇಗೌಡರು ಒಕ್ಕಲಿಗ ಸಮುದಾಯದಲ್ಲಿ ಹುಟ್ಟಿದರು. ಆದರೆ, ಆಡಳಿತ ನಡೆಸುವಾಗ ಎಲ್ಲಾ ಜನಾಂಗದವರನ್ನು ಒಟ್ಟಿಗೆ ಸೇರಿಸಿಕೊಂಡು ಬೆಂಗಳೂರು ನಗರ ಕಟ್ಟಿದರು ಎಂದರು.

ಆಯಾಯ ಜನಾಂಗದ ಹೆಸರಿನಲ್ಲಿ ಬೆಂಗಳೂರಿನಾದ್ಯಂತ ಪೇಟೆಗಳನ್ನು ನಿರ್ಮಿಸಿದರು. ಪುಸ್ತಕದ ಜ್ಞಾನದ ಜತೆಗೆ ಕೌಶಲ್ಯ ಮುಖ್ಯ ಎಂಬ ಪರಿಕಲ್ಪನೆಯೊಂದಿಗೆ ಬೆಂಗಳೂರು ನಗರ ಕಟ್ಟಿದರು. ಮಾಡಿದ ಸೇವೆಗೆ ಪ್ರತಿಫಲ ಬಯಸದ ನಿಸ್ವಾರ್ಥಿ ನಾಡಪ್ರಭು ಕೆಂಪೇಗೌಡರು. ಅಗ್ರಹಾರಗಳನ್ನು ಸ್ಥಾಪಿಸಿ ಜ್ಞಾನ ಸಂಪಾದನೆಗೂ ದಾರಿ ಮಾಡಿಕೊಟ್ಟರು. ಅವರ ಆಳ್ವಿಕೆಯ ಕಾಲದಲ್ಲಿ ನಮ್ಮ ದೇಶದ ಜಿಡಿಪಿ ಜಗತ್ತಿನ 190 ದೇಶಗಳ ಪೈಕಿ ಶೇ.25ರಷ್ಟು ನಮ್ಮ ದೇಶದ ಪಾಲು ಇತ್ತು. ಕೆಂಪೇಗೌಡರ ಆಳ್ವಿಕೆ ಕಾಲದಲ್ಲಿ ಮುತ್ತು ರತ್ನಗಳನ್ನು ರಸ್ತೆ ಬದಿಯಲ್ಲಿ ಮಾರಾಟ ಮಾಡಲಾಗುತ್ತಿತ್ತು ಎಂದು ಹೇಳಿದರು.

ಶಾಸಕ ಕೆ.ಹರೀಶ್ ಗೌಡ ಮಾತನಾಡಿ, ಕೆಂಪೇಗೌಡರ ಪ್ರತಿಮೆಯನ್ನು ಪ್ರತಿಯೊಂದು ಗ್ರಾಮದಲ್ಲೂ ಸ್ಥಾಪನೆ ಮಾಡಬೇಕು ಎಂಬುದು ನನ್ನ ಆಸೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರನ್ನು ನಾನು ಮಾದರಿಯಾಗಿ ಇಟ್ಟುಕೊಂಡಿದ್ದೇನೆ. ಕೆಂಪೇಗೌಡರು, ಕುವೆಂಪು ಮತ್ತು ಎಚ್.ಡಿ.ದೇವೇಗೌಡರ ಬಗ್ಗೆ ಹೆಚ್ಚು ಪ್ರಚಾರ ಮಾಡಬೇಕು ಎಂದರು.

ಶಾಸಕ ಜಿ.ಡಿ. ಹರೀಶ್ ಗೌಡ ಮಾತನಾಡಿ, ಕೆಂಪೇಗೌಡರು ಇಡೀ ರಾಜ್ಯಕ್ಕೆ ಮಾದರಿಯಾಗಿದ್ದರು. ಬೆಂಗಳೂರಿನಂತಹ ಬೃಹತ್ ನಗರವನ್ನು ಅವರು ಕಟ್ಟಿದರು. ಈ ನಾಡಿಗೆ ಎಚ್.ಡಿ.ದೇವೇಗೌಡರ ಕೊಡುಗೆಯೂ ಅಪಾರ. ಕೆಂಪೇಗೌಡರ ನಂತರ ದೇವೇಗೌಡ, ಎಸ್.ಎಂ.ಕೃಷ್ಣ, ಎಚ್.ಡಿ.ಕುಮಾರಸ್ವಾಮಿಯವರು ಅತಿ ಹೆಚ್ಚು ಕೊಡುಗೆ



ನೀಡಿದ್ದಾರೆ. ಲಲಿತಾದ್ರಿಪುರ ಗ್ರಾಮಸ್ಥರೆಲ್ಲರೂ ಸೇರಿಕೊಂಡು ಯಾರ ಬಳಿಯೂ ಹಣ ಕೇಳದೇ ತಾವೇ ಮುಂದೆ ಬಂದು ಕೆಂಪೇಗೌಡರ ಪ್ರತಿಮೆ ಸ್ಥಾಪಿಸಿರುವುದು ಶ್ಲಾಘನೀಯ ಎಂದರು.

ಮುಂದಿನ ದಿನಗಳಲ್ಲಿ ಕೆಂಪೇಗೌಡರ ಶಕ್ತಿಯನ್ನು ಕುಮಾರಣ್ಣನಿಗೆ, ನಿಖಿಲ್ ಅವರಿಗೆ ಕೊಡಲಿ. ಯಾವುದೇ ಅಧಿಕಾರ ಇಲ್ಲದಿದ್ದರೂ ನಿಖಿಲ್ ರಾಜ್ಯದಾದ್ಯಂತ ಸುತ್ತಾಡಿ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಲಲಿತಾದ್ರಿಪುರದಲ್ಲಿ ಸಮುದಾಯ ಭವನ ನಿರ್ಮಾಣ ಮಾಡುತ್ತೇವೆಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಶಾಸಕರಾದ ಸಾ.ರಾ.ಮಹೇಶ್, ಅಶ್ವಿನ್ ಕುಮಾರ್, ಮಾಜಿ ಮೇಯರ್ ರವಿಕುಮಾರ್, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಕೆ.ವಿ.ಶ್ರೀಧರ್, ಎಬಿಎಂ ಮಂಜು, ಮೈಮುಲ್ ಮಾಜಿ ಅಧ್ಯಕ್ಷ ಪ್ರಸನ್ನ ಸೇರಿದಂತೆ ಸ್ಥಳೀಯ ಜೆಡಿಎಸ್ ನಾಯಕರು ಇದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ರೈತರ ಬಂಧನಕ್ಕೆ ಖಂಡನೆ



**ಬಳ್ಳಾರಿ, ಏ.29:** ಕುಡಿತಿನಿ ರೈತರು ಭೂ ಸಂತ್ರಸ್ತರ ಕುಟುಂಬದವರಿಗೆ ಉದ್ಯೋಗ ತಮ್ಮ ಭೂ ಬೆಲೆಯನ್ನು ನೀಡಲಾರದೇ ಇದ್ದುರಿಂದ ನಮ್ಮ ಭೂಮಿಯನ್ನು ವಾಪಸ್ ಕೊಡಿ ಎಂದು ನ್ಯಾಯಯುತವಾಗಿ ಹೋರಾಟ ಮಾಡುತ್ತಿರುವ ರೈತರನ್ನು ಬಂಧಿಸಿದ್ದನ್ನ ಖಂಡಿಸಿ ಹಾಗೂ ರಾಜ್ಯ ಸರ್ಕಾರವು ರೈತರ ಬೇಡಿಕೆಗಳನ್ನು ಈಡೇರಿಸಿ ನ್ಯಾಯವನ್ನು ಒದಗಿಸಿ ಕೊಡುವಂತೆ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾ ಸಮಿತಿ ಆಗ್ರಹಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದು, ಕುಡಿತಿನಿ ಮತ್ತು ಸುತ್ತಲ 7 ಹಳ್ಳಿಗಳ ಸುಮಾರು 900.ಎಕ್ಕ–ರೆ ರೈತರ ಜಮೀನನ್ನು ಜಿಂದಾಲ್ ಕಂಪನಿಗೆ ವರ್ಗಾವಣೆ ಮಾಡುವ ತೀರ್ಮಾನದ ವಿರುದ್ಧ ಭೂ ಸಂತ್ರಸ್ತರ ರೈತರು ಶಾಂತಿಯುತವಾಗಿ ಹೋರಾಟ ಮಾಡುತ್ತಿದ್ದಾಗ ಸುಮಾರು 300 ಕ್ಕೂ ಹೆಚ್ಚು ರೈತರನ್ನು ಬಂಧಿಸಿರುವುದು ಪ್ರತಿಭಟನೆ ನಡೆಸಿ ರೈತರನ್ನು ಬೇಷರತ್ ಬಿಡುಗಡೆ ಮಾಡಿ ರೈತರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿದೆ.

ಕೆಐಎಡಿಬಿ ಜಿಂದಾಲ್ ಕಂಪನಿ ಜೊತೆ ಮಾಡಿಕೊಂಡಿರುವ ಅಕ್ರಮವಾದ ಜಮೀನು ಪರಭಾರೆಯನ್ನು ರದ್ದುಪಡಿಸಬೇಕು, ಸುಪ್ರೀಂ ಕೋರ್ಟ್ ತೀರ್ಪಿನಂತೆ ಪರಿಹಾರ ಒದಗಿಸಿ ಕೈಗಾರಿಕೆಗಳನ್ನು ಸ್ಥಾಪಿಸಬೇಕು ಅಥವಾ ರೈತರಿಗೆ ಅವರ ಭೂಮಿಯನ್ನು ವಾಪಸು ನೀಡಬೇಕು. ಬಂಧಿಸಿರುವ ಎಲ್ಲಾ ರೈತ ಮುಖಂಡರನ್ನು, ರೈತರನ್ನು ಮತ್ತು ಮಹಿಳೆಯರನ್ನು ಬಿಡುಗಡೆ ಮಾಡಲು ಮಾನ್ಯ ಮುಖ್ಯಮಂತ್ರಿಗಳು ಕೂಡಲೇ ಮಧ್ಯಪ್ರವೇಶಿಸಿ ರೈತರೊಂದಿಗೆ ಮಾತುಕತೆ ನಡೆಸಿ ಅವರ ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾ ಸಮಿತಿ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ ಶಂಕರ್ ನಂದಿಹಾಳ, ಸಿ ಹನುಮೇಶ್ ಕಟ್ಟಿಮನಿ ಜಿಲ್ಲಾ ಕಾರ್ಯಧ್ಯಕ್ಷ ಟಿ ಶೇಷಪ್ಪ ಜಿಲ್ಲಾ ಖಜಾಂಚಿ ವಿಠಲ್ ದಲಿತ ಮುಖಂಡರು ಉಮೇಶ್ ಮೇಸ್ತ್ರಿ ಹಾಗೂ ಇನ್ನಿತರ ಭಾಗವಹಿಸಿದ್ದರು

# ಏಪ್ರಿಲ್ 30ರಂದು ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ

**ರಾಯಚೂರು:**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸರ್ಕಾದ ನಿರ್ದೇಶನದಂತೆ 2026ನೇ ಸಾಲಿನಲ್ಲಿ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯ ಪ್ರಧಾನ ಸಮಾರಂಭವನ್ನು ನಗರದ ಪಂಡಿತ್ ಸಿದ್ದರಾಮ್ ಜಂಬಲದಿನ್ನಿ ರಂಗಮಂದಿರದಲ್ಲಿ ಏಪ್ರಿಲ್ 30ರ ಸಂಜೆ 4ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಅಧಿನ ಇಲಾಖೆಯ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು,ಸಿಬ್ಬಂದಿಯವರೊಂದಿಗೆ ಖುದ್ದಾಗಿ ಹಾಜರಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವದುರ್ಗ: ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು** : ಜಿಲ್ಲೆಯ ದೇವದುರ್ಗ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2026ನೇ ಸಾಲಿನಲ್ಲಿ ವಿವಿಧ ವೃತ್ತಿಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ಇಲಾಖಾ ವೆಬ್‌ಸೈಟ್ ವಿಳಾಸ: www.cite.karnataka.gov.in ನಲ್ಲಿ ಖಾಸಗಿ ಕಂಪ್ಯೂಟರ್ ಸೆಂಟರ್‌ಗಳಲ್ಲಿ ಅಥವಾ ನೇರವಾಗಿ ಸಂಸ್ಥೆಯಲ್ಲಿ ಆನ್‌ಲೈನ್ ಮುಖಾಂತರ ಮೇ.08ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಮಹಿಳಾ ಅಭ್ಯರ್ಥಿಗಳಿಗೆ ಉಚಿತ ಪ್ರವೇಶವನ್ನು ನೀಡಲಾಗಿದೆ. ಅಭ್ಯರ್ಥಿಗಳು ಕಡ್ಡಾಯವಾಗಿ ಮೊಬೈಲ್ ಸಂಖ್ಯೆ & ಇಮೇಲ್ ವಿಳಾಸವನ್ನು ಹೊಂದಿರಬೇಕು. ಅಭ್ಯರ್ಥಿಗಳು 10 ನೇ ತರಗತಿಯ ದೃಡೀಕೃತ ಆನ್‌ಲೈನ್ ಅಂಕಪಟ್ಟಿ, ಇತ್ತಿಚೀನ 03 ಪೋಟೋಗಳು, ಜಾತಿ & ಆದಾಯ ಪ್ರಮಾಣ ಪತ್ರದ ಪ್ರತಿಗಳು ಸಲ್ಲಿಸುವುದು ಕಡ್ಡಾಯವಾಗಿದೆ. ಜೊತೆಗೆ 371 ಜೆ, ಕನ್ನಡ ಮತ್ತು ಗ್ರಾಮೀಣ ಮಾಧ್ಯಮ ಪ್ರಮಾಣ ಪತ್ರಗಳ ಪ್ರತಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9740671796, 9986850720, 9900971501 ಅಥವಾ 9113519543ಗೆ ಸಂಪರ್ಕ ಮಾಡಬಹುದಾಗಿದೆ ಎಂದು ದೇವದುರ್ಗ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಳೆ ಹಾನಿ ಪ್ರದೇಶಗಳಿಗೆ ಸಚಿವ ಮಧು ಭೇಟಿ: ಕ್ರಮಕ್ಕೆ ಸೂಚನೆ

**ಶಿವಮೊಗ್ಗ, ಏ.29:–** ಬಿರುಗಾಳಿ ಮತ್ತು ಮಳೆಯಿಂದ ಹಾನಿಗೊಳಗಾದ ಅಡಿಕೆ, ತೆಂಗು ತೋಟ ಸೇರಿದಂತೆ ಬೆಳೆ ಹಾನಿಯಾದ ರೈತರಿಗೆ ಮತ್ತು ಮನೆ ಕಳೆದುಕೊಂಡವರಿಗೆ ತಕ್ಷಣವೇ ಸೂಕ್ತ ಪರಿಹಾರ ಬಿಡುಗಡೆ ಮಾಡುವಂತೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪನವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗಾಳಿ ಮಳೆ ಹಾನಿಗೊಳಗಾದ ಶಿವಮೊಗ್ಗ ಗ್ರಾಮಾಂತರ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು ಅರಹತೊಳಲು ಗ್ರಾಮದ ತೋಟಕ್ಕೆ ಭೇಟಿ ನೀಡಿ ಬಿರುಗಾಳಿ ಮತ್ತು ಮಳೆಯಿಂದಾಗಿ ಧರೆಗುರುಳಿದ ಮರಗಳನ್ನು ವೀಕ್ಷಿಸಿ, ಸಂತ್ರಸ್ತ ರೈತರೊಂದಿಗೆ ಮಾತನಾಡಿದರು.

ಬಿರುಗಾಳಿಗೆ ಧರೆಗುರುಳಿದ ಅಡಿಕೆ ಮರಗಳು, ಹಾನಿಗೊಳಗಾದ ಮನೆಗಳು ವೀಕ್ಷಿಸಿದರು. ಸಂತ್ರಸ್ತ ರೈತರು ಮತ್ತು ಸಾರ್ವಜನಿಕರೊಂದಿಗೆ ಮಾತನಾಡಿ ಅಹವಾಲು ಸ್ವೀಕರಿಸಿದರು.

ನಂತರ ಅರಹತೊಳಲು ವಡ್ಡರಹಟ್ಟಿಗೆ ತೆರಳಿ ಬಿರುಗಾಳಿಗೆ ಹಾನಿಗೊಳಗಾದ ಮನೆಗಳು, ಕೊಟ್ಟಿಗೆಗಳನ್ನು ವೀಕ್ಷಿಸಿ, ಮನೆಯವರೊಂದಿಗೆ ಮಾತನಾಡಿ, ಅಧಿಕಾರಿಗಳ ಬಳಿ ನಷ್ಟದ ಕುರಿತು ಮಾಹಿತಿ ಪಡೆದುಕೊಂಡು, ತ್ವರಿತ ಪರಿಹಾರಕ್ಕೆ ಕ್ರಮ ವಹಿಸಬೇಕೆಂದು ಸೂಚನೆ ನೀಡಿದರು.

ಮಲ್ಲಿಗೇನಹಳ್ಳಿ ಗ್ರಾಮದ ಹಾನಿಗೊಳಗಾದ ಅಡಿಕೆ ತೋಟಗಳನ್ನು ವೀಕ್ಷಿಸಿ ತ್ವರಿತ ಪರಿಹಾರಕ್ಕೆ ಸೂಚನೆ: ಬಿರುಗಾಳಿ, ಮಳೆಗೆ ಹಾನಿಗೊಳಗಾದ ಬೆಳೆ ಮತ್ತು ಮನೆಗಳ ಮಹಜರ್ ನ್ನು ಶೀಘ್ರದಲ್ಲೇ ಕೈಗೊಂಡು ಸಲ್ಲಿಸಲು ತಿಳಿಸಿದ್ದೇನೆ. ವಿದ್ಯುತ್ ಕಡಿತವಾಗಿ ಕುಡಿಯುವ ನೀರಿಗೆ ತೊಂದರೆಯಾಗಿದ್ದು ತಕ್ಷಣವೇ ಕುಡಿಯುವ ನೀರು ಮತ್ತು



36 ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ನೀಡುವಂತೆ ಮೆಸ್ಕಾಂಗೆ ಸೂಚನೆ ನೀಡಿದ್ದೇನೆ.

ಅರಹತೊಳಲಿನಲ್ಲಿ ಓರ್ವ ವ್ಯಕ್ತಿ ಸಾವು ಆಗಿದ್ದು ಕಾರಣ ತಿಳಿದು ವರದಿ ನೀಡಲು ಸೂಚನೆ ನೀಡಿದ್ದೇನೆ. ನಷ್ಟದ ಕುರಿತು ಸಮಗ್ರ ವರದಿ ನೀಡುವಂತೆ ಕಂದಾಯ ಇಲಾಖೆ, ಗ್ರಾ.ಪಂ. ವಿಪತ್ತು ನಿರ್ವಹಣೆ ಇಲಾಖೆ ಸೇರಿದಂತೆ ಸಮನ್ವಯ ಸಾಧಿಸಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ತಿಳಿಸಿದ್ದೇನೆ. ನಾನು ಖುದ್ದಾಗಿ ಹಾನಿಗೆ ಪರಿಹಾರ ನೀಡುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಜೊತೆ ಮಾತನಾಡುತ್ತೇನೆ. ವಡ್ಡರಹಟ್ಟಿ ಭಾಗದ ಹಲವು ಮನೆಗಳಿಗೆ ಇದುವರೆಗೆ ಗ್ರಾ.ಪಂ. ಯಿಂದ ಹಕ್ಕುಪತ್ರ ಲಭ್ಯವಾಗಿಲ್ಲ ಹಕ್ಕುಪತ್ರ ನೀಡುವಂತೆ ಮನವಿಮಾಡಿದ್ದು ಈ ಕುರಿತು ಅಧಿಕಾರಿಗಳಿಗೆ ಪರಿಶೀಲಿಸಿ ಕ್ರಮ ವಹಿಸುವಂತೆ ಸೂಚನೆ ನೀಡಿದರು.

ಮಳೆಗಾಲದಲ್ಲಿ ಮನೆ ಸುತ್ತ ಮುತ್ತ: ದುರ್ಬಲ ಮರಗಳು, ಮನೆಗಳ ಶೀಟ್ ಚಾವಣಿಗಳ ಬಗ್ಗೆ ಸಾರ್ವಜನಿಕರು ಸಹ ಎಚ್ಚರಿಕೆ ವಹಿಸಬೇಕು. ಆಗ ಅದರಿಂದಾಗುವ ಅನಾಹುತ ತಪ್ಪಿಸಬಹುದೆಂದು ತಿಳಿಸಿದರು.

# ಜಾಗತಿಕ ರಕ್ಷಣಾ ಬಜೆಟ್ 274 ಲಕ್ಷ ಕೋಟಿ



**ನವದೆಹಲಿ,ಏ.29:–** ಪ್ರತಿಯೊಂದು ದೇಶವೂ ತನ್ನ ಮಿಲಿಟರಿ ಶಕ್ತಿಯನ್ನು ಬಲಪಡಿಸಲು ಶ್ರಮಿಸುತ್ತಿದೆ. ಅದಕ್ಕಾಗಿಯೇ 2026 ರಲ್ಲಿ ರಕ್ಷಣಾ ಬಜೆಟ್‌ಗಳು ಹೊಸ ದಾಖಲೆಗಳನ್ನು ತಲುಪುವ ನಿರೀಕ್ಷೆಯಿದೆ. ಪ್ರಮುಖ ರಾಷ್ಟ್ರಗಳು ತಮ್ಮ ಮಿಲಿಟರಿ ಶಕ್ತಿಯನ್ನು ವಿಸ್ತರಿಸಲು ಶತಕೋಟಿ ಡಾಲರ್‌ಗಳನ್ನು ಖರ್ಚು ಮಾಡುತ್ತಿದ್ದರೆ, ಸಣ್ಣ ರಾಷ್ಟ್ರಗಳು ಸೀಮಿತ ಸಂಪನ್ಮೂಲಗಳೊಂದಿಗೆ ಹೋರಾಡುತ್ತಿವೆ.

ಸ್ಟಾಕ್‌ಹೋಮ್ ಇಂಟರ್‌ನ್ಯಾಷನಲ್ ಪೀಸ್ ರಿಸರ್ಚ್ ಇನ್‌ಸ್ಟಿಟ್ಯೂಟ್ ವರದಿಯ ಪ್ರಕಾರ ಜಾಗತಿಕ ಮಿಲಿಟರಿ ವೆಚ್ಚವು ಸುಮಾರು $2.9 ಟ್ರಿಲಿಯನ್ (ಸುಮಾರು 274.20 ಲಕ್ಷ ಕೋಟಿ) ತಲುಪುವ ನಿರೀಕ್ಷೆಯಿದೆ . ಇದು ಕೇವಲ ಅಂಕಿಅಂಶವಲ್ಲ, ಆದರೆ ಜಗತ್ತಿನಲ್ಲಿ ಹೆಚ್ಚಿದ ಉದ್ವಿಗ್ನತೆಯ ಪ್ರತಿಬಿಂಬವಾಗಿದೆ. ಕಳೆದ 10 ವರ್ಷಗಳಲ್ಲಿ ಈ ಖರ್ಚು ಸರಿಸುಮಾರು ಶೇ. 41 ರಷ್ಟು ಹೆಚ್ಚಾಗಿದೆ. ಈಗ ಪರಿಸ್ಥಿತಿ ಎಷ್ಟರ ಮಟ್ಟಿಗೆ ತಲುಪಿದೆಯೆಂದರೆ, ದೇಶಗಳು ತಮ್ಮ ಜಿಡಿಪಿಯ ಸರಿಸುಮಾರು ಶೇ. 2.5 ರಷ್ಟು ರಕ್ಷಣೆಗಾಗಿಯೇ ಖರ್ಚು ಮಾಡುತ್ತಿವೆ.

ರಷ್ಯಾ–ಉಕ್ರೇನ್ ಯುದ್ಧ ಮಾತ್ರ ರಕ್ಷಣಾ ವೆಚ್ಚದಲ್ಲಿ ಶೇ.14 ರಷ್ಟು ಹೆಚ್ಚಳಕ್ಕೆ ಕಾರಣವಾಗಿದ್ದು, 81.73 ಟ್ರಿಲಿಯನ್ ತಲುಪಿದೆ. ಉಕ್ರೇನ ರಕ್ಷಣಾ ಬಜೆಟ್ ಈಗ ಜಿಡಿಪಿಯ ಸುಮಾರು ಶೇ.40 ರಷ್ಟಿದೆ. ಯುದ್ಧ ಮತ್ತು ಭೌಗೋಳಿಕ ರಾಜಕೀಯ ಅನಿಶ್ಚಿತತೆಗೆ ಪ್ರತಿಕ್ರಿಯಿಸಲು ದೇಶಗಳಿಗೆ ಮಿಲಿಟರಿ ವೆಚ್ಚವನ್ನು ಹೆಚ್ಚಿಸುವುದು ಅತ್ಯಗತ್ಯ ಎಂದು ರಕ್ಷಣಾ ವಿಶ್ಲೇಷಕರು ಹೇಳುತ್ತಾರೆ. ಆದಾಗ್ಯೂ, ಇದು ಭದ್ರತೆಯನ್ನು ಖಾತರಿಪಡಿಸುವ ಬದಲು ಶಸ್ತ್ರಾಸ್ತ್ರ ಸ್ಪರ್ಧೆಯನ್ನು ಉತ್ತೇಜಿಸಬಹುದು ಎಂದು ವಿಶ್ವಸಂಸ್ಥೆ (ಯುಎನ್) ಮತ್ತು ಅಂತರರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಕಳವಳ ವ್ಯಕ್ತಪಡಿಸಿವೆ.

ಇತಿಹಾಸವು ಮಿಲಿಟರಿ ಬಜೆಟ್ ಹೆಚ್ಚಾದಾಗಲೆಲ್ಲಾ ದೇಶಗಳ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ ಎಂದು ತೋರಿಸುತ್ತದೆ. ಇದು ಸರ್ಕಾರಿ ಸಾಲವನ್ನು ಹೆಚ್ಚಿಸಲು ಮತ್ತು ಸಾಮಾಜಿಕ ಕಾರ್ಯಕ್ರಮಗಳಿಗೆ ಕಡಿತಗೊಳಿಸಲು ಕಾರಣವಾಗಿದೆ.ಹೆಚ್ಚುತ್ತಿರುವ ಮಿಲಿಟರಿ ವೆಚ್ಚದ ಬಗ್ಗೆ ವಿಶ್ವಸಂಸ್ಥೆ (ಯುಎನ್) ಕೂಡ ಕಳವಳ ವ್ಯಕ್ತಪಡಿಸಿದೆ. 2024 ರಲ್ಲಿ ಜಾಗತಿಕ ಮಿಲಿಟರಿ ವೆಚ್ಚವು ಅಭಿವೃದ್ಧಿ ನೆರವಿಗಿಂತ 13 ಪಟ್ಟು ಹೆಚ್ಚಾಗಿದೆ ಎಂದು ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಹೇಳಿದ್ದಾರೆ. ಈ ಅಂಕಿ ಅಂಶವು ಆಫ್ರಿಕಾದ ಎಲ್ಲಾ ಜಿಡಿಪಿಗೆ ಸಮಾನವಾಗಿದೆ. ರಕ್ಷಣಾ ವೆಚ್ಚದಲ್ಲಿನ ನಿರಂತರ ಏರಿಕೆಯು ಜಗತ್ತನ್ನು ಹೊಸ ಶಸ್ತ್ರಾಸ್ತ್ರ ಸ್ಪರ್ಧೆಯತ್ತ ತಳ್ಳುತ್ತಿದೆ ಎಂದು ವಿಶ್ವಸಂಸ್ಥೆಯ ವರದಿಯೊಂದು ಎಚ್ಚರಿಸಿದೆ. ಇದು ದೇಶಗಳ ಬಜೆಟ್ ಮೇಲೆ ಒತ್ತಡ ಹೇರುತ್ತಿದೆ ಮತ್ತು ಅವುಗಳ ಆದ್ಯತೆಗಳನ್ನು ಬದಲಾಯಿಸುತ್ತಿದೆ.

ಸುಮ್ಮನೆ ಶಸ್ತ್ರಾಸ್ತ್ರಗಳನ್ನು ಹೆಚ್ಚಿಸುವುದರಿಂದ ಜಗತ್ತು ಸುರಕ್ಷಿತವಾಗುವುದಿಲ್ಲ. ಈಗ ಜಗತ್ತಿನಲ್ಲಿ ಹೆಚ್ಚು ಶಸ್ತ್ರಾಸ್ತ್ರಗಳಿರುವುದರಿಂದ, ತಪ್ಪು ನಿರ್ಧಾರಗಳ ಅಪಾಯವೂ ಹೆಚ್ಚಾಗುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ.
ಮೆಲ್ಬೋರ್ನ್ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕ ಜಾನ್ ಲ್ಯಾಂಗೋರ್ ಕೂಡ ಈ ಪರಿಸ್ಥಿತಿಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಇಂದು ಭದ್ರತೆಗಾಗಿ ಹೆಚ್ಚಿದ ಮಿಲಿಟರಿ ವೆಚ್ಚ ಅಗತ್ಯ ಎಂಬ ಗ್ರಹಿಕೆ ಇದೆ, ಆದರೆ ವಾಸ್ತವದಲ್ಲಿ, ಇದು ದೇಶಗಳ ನಡುವಿನ ಸ್ಪರ್ಧೆಯನ್ನು ಹೆಚ್ಚಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಗುರು ನಾನಕ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿಯ ಸಾಧನೆ



**ಬೀದರ:ಏ.29:** ನಗರದ ನೇಹರು ಸ್ಟೇಡಿಯಂ ಹತ್ತೀರ ವಿರುವ ಗುರು ನಾನಕ ಪಬ್ಲಿಕ್ ಶಾಲೆಯ 10ನೇ ತರಗತಿಯ ವಿದ್ಯಾರ್ಥಿನಿ ಕು. ಇಂದಿರಾ ಖೂಬಾ ಅವರು "ಡಿ ಬೌಂಡ್ ಬೈ ಎ ಸೈಲೆಂಟ್ ಥ್ರೆಡ್" ಸಮ್ ಲೈವ್ಸ್ ಆರ್ ನೆವರ್ ಮೀಟ್ ಟು ಬಿ ಸೆಪರೇಟೆಡ್ ಎಂಬ ಪುಸ್ತಕವನ್ನು ಬರೆದು ಗಮನ ಸೆಳೆದಿದ್ದಾರೆ.
ಈ ಗಮನಾರ್ಹ ಕೃತಿಯು ನಿಗೂಢತೆ, ಗುಪ್ತ ಸತ್ಯಗಳು ಮತ್ತು ಆಳವಾದ ಭಾವನಾತ್ಮಕ ಉದ್ವೇಗದಿಂದ ಹೆಣೆಯಲ್ಪಟ್ಟ ಮಾನಸಿಕ ಫ್ಯಾಂಟಸಿ ಥ್ರಿಲರ್ ಆಗಿದೆ. ಪುಸ್ತಕವು ಈಗ ಅಮೆಜಾನ್‌ನಲ್ಲಿ ಲಭ್ಯವಿದೆ.
ಈ ಅತ್ಯುತ್ತಮ ಸಾಹಿತಿ ಸಾಧನೆಗೆ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರನ್ನು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ ಮತ್ತು ಅವರ ಭವಿಷ್ಯದ ಎಲ್ಲಾ ಪ್ರಯತ್ನಗಳಲ್ಲಿ ಅವರಿಗೆ ಉತ್ತಮ ಯಶಸ್ಸನ್ನು ಸಿಗಲಿ ಎಂದು ಹಾರೈಸಿದ್ದಾರೆ.
ಸಾಧನೆಗೈದ ವಿದ್ಯಾರ್ಥಿನಿ ಕು. ಇಂದಿರಾ ಖೂಬಾ ಅವಳನ್ನು ಶಾಲೆಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.
ಈ ಸಂದರ್ಭದಲ್ಲಿ ಇಂದಿರಾ ಅವರ ಪೋಷಕರು, ಡೀನರಾದ ಬಿ. ಹನುಮಾನ, ಪ್ರಾಂಶುಪಾಲೆ ನಲಿನಿ ಡಿ.ಜಿ. ಮತ್ತು ಅಮಜದ ಅಲಿ ಉಪಸ್ಥಿತರಿದ್ದರು.
ವಿದ್ಯಾರ್ಥಿನಿ ಇಂದಿರಾ ಖೂಬಾ ಮಾತನಾಡಿ ಗುರು ನಾನಕ ಶಾಲೆಯ ವಾತಾವರಣ ಚೆನ್ನಾಗಿದೆ. ಇಲ್ಲಿ ಶಿಕ್ಷಕರು ಬಹಳ ಸಹಕಾರಿ ಮತ್ತು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುತ್ತಾರೆ ಎಂದು ಈ ಸಂದರ್ಭದಲ್ಲ ಮೆಚ್ಚುಗೆ ವ್ಯಕ್ತಪಡಿಸಿದರು.

# ಪೊಲೀಸ್ ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ಸರ್ಕಾರ ಬದ್ಧ :ಡಾ.ಜಿ.ಪರಮೇಶ್ವರ

**ಕಲಬುರಗಿ,ಏ.29:** ನಾಡಿನಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊಂದಿರುವ ಪೊಲೀಸ್
ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಜ್ಯದ ಗೃಹ ಸಚಿವ ಡಾ. ಜಿ ಪರಮೇಶ್ವರ ಹೇಳಿದರು.

ಮಂಗಳವಾರ ಕಲಬುರಗಿ ನಗರದ ಸಿ.ಎ.ಆರ್. ಪೊಲೀಸ ಮೈದಾನದಲ್ಲಿ ಕಲಬುರಗಿ ನಗರ ಪೊಲೀಸ್ ಹಾಗೂ ಕಲಬುರಗಿ ಜಿಲ್ಲಾ ಪೊಲೀಸ್ ಮತ್ತು ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 20.88 ಕೋಟಿ ರೂ ವೊತ್ತದ 72 ಪೊಲೀಸ ವಸತಿ ಗೃಹಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.
ಕಲಬುರಗಿ ನಗರದಲ್ಲಿ 24 ಪೊಲೀಸ್ ವಸತಿ ಗೃಹ ಕಟ್ಟಡಗಳು, ಅಫಜಲಪುರ ಪಟ್ಟಣದಲ್ಲಿ 24, ದೇವಲ ಗಾಣಗಾಪುರದಲ್ಲಿ 12, ಆಳಂದ ಪಟ್ಟಣದಲ್ಲಿ 12 ಪೊಲೀಸ್ ವಸತಿ ಗೃಹ ಕಟ್ಟಡಗಳನ್ನು ಇಂದಿಲ್ಲಿ ಪೊಲೀಸ್ ಸಿಬ್ಬಂದಿಗೆ ಸಮರ್ಪಿಸಲಾಗಿದೆ ಎಂದರು.
ಬ್ರಿಟಿಷರ ಕಾಲದ ಹಳೆಯ 'ಪೊಲೀಸ್ ಲೈನ್' ಮನೆಗಳ ಬದಲಿಗೆ, ಆಧುನಿಕ ಸೌಲಭ್ಯವುಳ್ಳ ' ಪೊಲೀಸ್ ಗೃಹ' ಯೋಜನೆಯಡಿ ರಾಜ್ಯಾದ್ಯಂತ ಈಗಾಗಲೇ 40,712 ಮನೆಗಳನ್ನು ನಿರ್ಮಿಸಲಾಗಿದೆ. ಇನ್ನೂ 1,830 ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಪೊಲೀಸ್ ಸಿಬ್ಬಂದಿ ಮತ್ತು ಅವರ ಕುಟುಂಬದವರಿಗೆ ಉತ್ತಮ ಸೌಲಭ್ಯ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದರು.
ಸಂಚಾರಿ ನಿರ್ವಹಣೆ ಸೇರಿದಂತೆ ಇಲಾಖೆಯ ಕೆಲಸಗಳಲ್ಲಿ ಆಧುನಿಕ ತಂತ್ರಜ್ಞಾನ ಮತ್ತು ಮಾಡರ್ನ್ ಫೆಸಿಲಿಟಿಗಳನ್ನು ಅಳವಡಿಸಿಕೊಳ್ಳಲು ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಮಳೆ, ಬಿಸಿಲು ಎನ್ನದೆ ಹಗಲಿರುಳು ಶ್ರಮಿಸುವ ಪೊಲೀಸರು ಮತ್ತು ಅವರ ಕುಟುಂಬದ ಹಿತರಕ್ಷಣೆ ಸರ್ಕಾರದ ಜವಾಬ್ದಾರಿಯಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಪೊ?ಷಕರಿಗೆ ನೆರವಾಗಲು ವಸತಿ ಸೌಕರ್ಯ ಅತ್ಯಗತ್ಯ ಎಂದರು.
ಪ್ರಸ್ತುತ ಇಲಾಖೆಯಲ್ಲಿ ಸುಮಾರು 15,000 ದಿಂದ 16,000 ಹುದ್ದೆಗಳು ಖಾಲಿ ಇವೆ. ಮೊದಲ ಹಂತದಲ್ಲಿ ಸುಮಾರು 8,000 ಹುದ್ದೆಗಳ ಭರ್ತಿಗೆ ಮುಂದಿನ 10 ದಿನಗಳಲ್ಲಿ ಅಧಿಕೃತ ಅಧಿಸೂಚನೆ ಹೊರಡಿಸಲಾಗುವುದು ಎಂದು ಗೃಹ ಸಚಿವರು ಇದೇ ಸಂದರ್ಭದಲ್ಲಿ ತಿಳಿಸಿದರು.
ಕಾರ್ಯಕ್ರಮದಲ್ಲಿ ಭಾಗವಹಿಸಿದ ವೈದ್ಯಕೀಯ ಶಿಕ್ಷಣ, ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮಾತನಾಡಿ, ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ಪೊಲೀಸ್ ಇಲಾಖೆಯಲ್ಲಿ ತರುತ್ತಿರುವ ಅನೇಕ ಬದಲಾವಣೆ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದ ಅವರು, ಇಡೀ ದೇಶದಲ್ಲೇ ಕರ್ನಾಟಕ ಪೊಲೀಸ್ ಇಲಾಖೆ ಉತ್ತಮ ಸ್ಥಾನದಲ್ಲಿರಲು ಅವರ ದೂರದೃಷ್ಟಿ ಮತ್ತು ನಿಸ್ವಾರ್ಥ ಸೇವೆ ಕಾರಣ ಎಂದರು.

ರಾಜ್ಯಸಭೆಯ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರ ಪ್ರಯತ್ನದಿಂದ ಜಾರಿಯಾದ ಆರ್ಟಿಕಲ್ 371(ಜೆ) ಈ ಕಾಯ್ದೆಯು ಈ ಭಾಗದ ಯುವಕರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ (ಇಂಜಿನಿಯರಿಂಗ್, ವೈದ್ಯಕೀಯ) ದೊಡ್ಡ ಮಟ್ಟದ ಅವಕಾಶಗಳನ್ನು ಕಲ್ಪಿಸಿದೆ. ಗ್ಯಾರಂಟಿ ಯೋಜನೆಗಳ ಜೊತೆಗೆ ಪ್ರತಿ ವರ್ಷ ಈ ಭಾಗಕ್ಕೆ ,5000



ಕೋಟಿ ರೂಪಾಯಿ ಅನುದಾನ ನೀಡುವ ಮೂಲಕ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.
ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಮಾತನಾಡಿ ದಕ್ಷಿಣ ಕ್ಷೇತ್ರದ ಕೋಟನೂರ 'ಡಿ' ಪ್ರದೇಶದಲ್ಲಿ ರಾತ್ರಿ ವೇಳೆಯಲ್ಲಿ ಅಹಿತಕರ ಘಟನೆಗಳು ನಡೆಯುತ್ತಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಇಲ್ಲಿ ಒಂದು ಪೊಲೀಸ್ ಸ್ಟೇಷನ್ ಸ್ಥಾಪಿಸಬೇಕು ಹಾಗೂ ಪಟ್ಟಣ ಗ್ರಾಮದಲ್ಲಿ ಒಂದು ಔಪೋಸ್ಟ್ ಸ್ಟೇಷನ್ (ಪೊಲೀಸ್ ಹೊರಠಾಣೆ) ಸ್ಥಾಪಿಸಬೇಕೆಂದು ಸಚಿವರಲ್ಲಿ ಬೇಡಿಕೆ ಇಟ್ಟರು. ಶಾಸಕರ ಮನವಿಗೆ ಪೂರಕವಾಗಿ ಸ್ಪಂದಿಸಿದ ಗೃಹ ಸಚಿವರು, ಈಗಾಗಲೇ ವಿಧಾನಸಭೆಯಲ್ಲಿ ಈ ಬಗ್ಗೆ ಭರವಸೆ ನೀಡಿರುವುದನ್ನು ಸ್ಮರಿಸಿದರು. ಕ್ಷೇತ್ರದ ಜನರ ಬೇಡಿಕೆಗಳನ್ನು ಆದ್ಯತೆಯ ಮೇಲೆ ಈಡೇರಿಸುವುದಾಗಿ ಭರವಸೆ ನೀಡಿದರು.
ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಶಾಸಕ ಬಿ.ಆರ್. ಪಾಟೀಲ್, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಖನೀಜಾ ಫಾತಿಮಾ, ಅಫಜಲಪುರ ಶಾಸಕ ಎಂ.ವೈ. ಪಾಟೀಲ್, ವಿಧಾನ ಪರಿಷತ್ ಶಾಸಕರುಗಳಾದ ಜಗದೇವ್ ಗುತ್ತೇದಾರ್, ತಿಪ್ಪಣ್ಣಪ್ಪ ಕಮಕನೂರ್, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯದ್ ಮೊಹಮ್ಮದ್ ಚಿಸ್ತಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರರಾದ ವರ್ಷಾ ರಾಜೀವ ಜಾನೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷಾನ ಪ್ರಾಧಿಕಾರದ ಅಧ್ಯಕ್ಷ ಚಂದ್ರಿಕಾ ಪರಮೇಶ್ವರ್, ರಾಜ್ಯದ ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾ ನಿರೀಕ್ಷಕರು ಡಾ. ಎಂ.ಎಸ್. ಸಲೀಂ, ಈಶಾನ್ಯ ವಲಯದ ಡಿ.ಐ.ಜಿ ಶಾಂತನು ಸಿನ್ಹಾ, ಕಲಬುರಗಿ ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಬೀದರ್ ಎಸ್.ಪಿ. ಪ್ರದೀಪ್ ಗುಂಟಿ, ಯಾದಗಿರಿ ಎಸ್.ಪಿ. ಪೃಥ್ವಿಕ್ ಶಂಕರ್ ಸೇರಿದಂತೆ ಇಲಾಖೆಯ ಪ್ರಮುಖ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಸ್ವಾಗತಿಸಿದರು.

# ಆಳಂದನಲ್ಲಿ ಜನಮನ ತಂಪು ಮಾಡಿದ ಕಲಾರಸಿಕರ ಸಂಭ್ರಮ

**ಆಳಂದ: ಏ.29:**ಪಟ್ಟಣದ ರೇವಣಸಿದ್ಧೇಶ್ವರ ಕಾಲೋನಿಯ ಶ್ರೀ ರೇವಣಸಿದ್ಧೇಶ್ವರ ದೇವಸ್ಥಾನದಲ್ಲಿ ಶ್ರೀ ಬಸವೇಶ್ವರ ಜಾನಪದ ಕಲಾ ಸಂಘ, ಬಸವನ ಸಂಗೋಳಗಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಆಯೋಜಿಸಿದ್ದ "ಜಾನಪದ ಕಲಾ ಸೌರಭ" ಕಾರ್ಯಕ್ರಮವು ಬೇಸಿಗೆಯ ತೀವ್ರ ಬಿಸಿಯ ನಡುವೆಯೇ ಜನರಿಗೆ ಮನತಂಪಿನ ಅನುಭವ ನೀಡಿತು.
ಬಿಸಿಲಿನ ತಾಪದಿಂದ ಬೇಸತ್ತಿದ್ದ ಜನಸಾಮಾನ್ಯರಿಗೆ ಈ ಕಾರ್ಯಕ್ರಮವು ಒಂದು ತಂಪಾದ ಆಶ್ರಯವಾಗಿ ಪರಿಣಮಿಸಿತು. ವಿವಿಧ ಕಲಾವಿದರು ತಮ್ಮ ಜಾನಪದ ಗಾಯನ, ಸಂಗೀತ ಹಾಗೂ ಸಾಂಸ್ಕೃತಿಕ ಪ್ರದರ್ಶನಗಳ ಮೂಲಕ ಕಲಾರಸಿಕರ ಮನಸೆಳೆಯುವುದರ ಜೊತೆಗೆ, ಸಾಂಪ್ರದಾಯಿಕ ಕಲೆಯ ಸುವಾಸನೆಯನ್ನು ಹರಡಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಸಂಗೀತ ಹಾಗೂ ಕಲಾ ಪ್ರೇಮಿ ಭೂಮಿಕಾ ಎಂ. ಪಾಟೀಲ ಅವರು ತಮ್ಮ ಹಾಡಿನ ಮೂಲಕವೇ ಜ್ಯೋತಿ ಬೆಳಗಿಸಿ ಉದ್ಘಾಟನೆ ನೆರವೇರಿಸಿದರು. ನಂತರ ಮಾತನಾಡಿದ ಅವರು, ಇಂತಹ ಕಾರ್ಯಕ್ರಮಗಳು ಜನಮನಕ್ಕೆ ಶಾಂತಿ ನೀಡುವುದರ ಜೊತೆಗೆ, ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರವಹಿಸುತ್ತವೆ ಎಂದು ತಿಳಿಸಿದರು. ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳು ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಅವರ ವ್ಯಕ್ತಿತ್ವ ವಿಕಾಸಕ್ಕೂ ಸಹಕಾರಿಯಾಗುತ್ತದೆ ಎಂದು ಹೇಳಿದರು. ನಿವೃತ್ತ ಕೃಷಿ ಅಧಿಕಾರಿ ಷಣ್ಮೂಖಯ್ಯಾ ಸ್ವಾಮಿ ಅವರು ಮಾತನಾಡಿ, ಜಾನಪದ ಕಲೆಯ ಉಳಿವು ಮತ್ತು ಬೆಳವಣಿಗೆಗಾಗಿ ಸಮಾಜದ ಎಲ್ಲ ವಲಯದವರು ಸಹಕಾರ ನೀಡಬೇಕು ಎಂದು ಕರೆ ನೀಡಿದರು.
ದೇವಸ್ಥಾನ ಸಮಿತಿ ಅಧ್ಯಕ್ಷ ವಿಶ್ವನಾಥ ನಿಪ್ಪಾಣಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಿದ್ರಾಮಯ್ಯಾ ಖಂಡಾಳ ಸ್ವಾಮಿ ಅವರು ಸಾನ್ನಿಧ್ಯ ವಹಿಸಿದ್ದರು.
ವೇದಿಕೆಯಲ್ಲಿ ಸಂಗಮ್ಮ ಪ್ರಭುಲಿಂಗ ಪಾಟೀಲ, ಕಾಶಿನಾಥ ಸಲಗರ, ಶರಣಪ್ಪ ಸಂಜುವಾಡ ಸಾವಳೇಶ್ವರ, ಬಸವರಾಜ ಹತ್ತೆ ಕಿಣ್ಣಿಸುಲ್ತಾನ, ಧೂಳಯ್ಯಾ ಸ್ವಾಮಿ,




ಬಸವೇಶ್ವರ ಜಾನಪದ ಕಲಾ ಸಂಘದ ಅಧ್ಯಕ್ಷ ಗುರುಪಾದಯ್ಯಾ ಎಂ. ಹಿರೇಮಠ ಹಾಗೂ ಕಾರ್ಯದರ್ಶಿ ಶಿವಶರಣಯ್ಯಾಡಿ ಮಠ ಸೇರಿದಂತೆ ಕಾಲೋನಿಯ ಅನೇಕರು ಉಪಸ್ಥಿತರಿದ್ದರು.
ದಾಕ್ಷಯಿಣಿ ಚ, ಹಿರೇಮಠ ಪ್ರಾರ್ಥನೆ ಹಾಡಿದರು. ಕಲಬುರಗಿ ಮಲ್ಲಿಕಾರ್ಜುನ ಪಾಂಚಾಳ ಹಿಂದೂಸ್ಥಾನಿ ಸಂಗೀತ, ಷಣ್ಮೂಖಯ್ಯಾ ಮಠಪತಿ, ಎಲೆನಾವದಗಿ ಮುತ್ತರಾಜ ಪೂಜಾರಿ, ತತ್ವಪದ ಗಾಯನ, ಸುಂಟನೂರದ ರೇವಣಯ್ಯಾ ಎಂ. ಮಠಪತಿ ವಚನ ಗಾಯನ, ಬೋಳಣಿಯ ವಿಠ್ಠಲರಾವ್ ಎಂ. ಜಮಾದಾರ ಭಾವಗೀತೆ, ಶರಣಪ್ಪ ಎಂ. ಬಿಲಗುಂದಿ ಭಕ್ತಿ ಗೀತೆ, ಖೇರ್ಡ್ ಕೆ. ಮಾಣಿಕರಾವ್ ಗುತ್ತೇದಾರ ದಾಸವಾಣಿ, ಸಂಗೋಳಗಿ ಶಿವಾನಂದ ಕಂಟೆಪ್ಪಗೊಳ, ಕಲವಗಾ ಲಕ್ಷ್ಮೀ ವಿ. ಹಿರೇಮಠ ಸಂಪ್ರದಾಯ ಪದ, ಪ್ರಭುಲಿಂಗ ಜಿ. ಬಿರಾದಾ ಜಾನಪದ ಗೀತೆ ಹಾಗೂ ಚಿಟ್ಟಾ ಕೆ. ಮಹಾಲಿಂಗಯ್ಯಾಸ್ವಾಮಿತತ್ವ ಪದಕ್ಕೆ ತಬಲಾ ವಾದ್ಯ ನುಡಿಸಿದ ಬಾಲ್ಕಿಧರ್ಮರಾಜಕಟ್ಟಿಮನಿ ಹಾಗೂಕಣ್ಣೂರನ ವಿಜಯಕುಮಾರ ಪಾಂಚಾಳ ನಡೆಸಿಕೊಟ್ಟರು.

# ಬೀದರ್ ನಲ್ಲಿ ನೂತನ ಲಿಡ್ಕರ್ ಮಳಿಗೆ ಉದ್ಘಾಟನೆ ಮಾಡಿದ ಮುಂಡ್ರಿಗಿ ನಾಗರಾಜ್

**ಬಳ್ಳಾರಿ, ಏ.29:** ಬೀದರನಲ್ಲಿ ಡಾ. ಬಾಬು ಜಗಜೀವನ ರಾಂ ನಿಗಮ(ಲಿಡ್ಕರ್) ನೂತನವಾಗಿ ಆರಂಭಿಸಿರುವ ಲಿಡ್ಕರ್ ಮಾರಾಟ ಮಳಿಗೆಗೆ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಉದ್ಘಾಟನೆ ಮಾಡಿದ್ದಾರೆ.

ಇದೇ ವೇಳೆ ಅವರು ಸಮುದಾಯದ ಮುಖಂಡರು ಹಾಗೂ ಚರ್ಮ ಕುಶಲಕರ್ಮಿಗಳೊಂದಿಗೆ ಕುಂದು ಕೊರತೆ ಸಮಾಲೋಚನೆ ಮಾಡಿದರು.

ಈ ಸಂದರ್ಭದಲ್ಲಿ ಬೀದರ್ ನಗರಸಭೆ ಮಾಜಿ ಅಧ್ಯಕ್ಷ ಪರ್ನ್ ಡಿಸ್, ಬಳ್ಳಾರಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಗೋವರ್ಧನ್ , ಬೀದರ್ ಲಿಡ್ಕರ್ ಕಾಲೋನಿ ಸಮಾಜದ ಮುಖ್ಯಸ್ಥ ಶುಭಾಸ್, ಸಮುದಾಯದ ಯುವ ಮುಖಂಡ ಪ್ರದೀಪ್ ಹೆಗ್ಡೆ, ಬೀದರ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಲಿಡ್ಕರ್ ಜಿಲ್ಲಾ ಕಚೇರಿ ಸಿಬ್ಬಂದಿ ದತ್ತು ಹೊಸಮನಿ ಮೊದಲಾದವರು ಇದ್ದರು.



# ಗ್ರಾಮೀಣ ಗಡಿ ಭಾಗದ ರಸ್ತೆಗಳ ಕಾಯಕಲ್ಪಕ್ಕೆ ಸರ್ಕಾರ ಬದ್ಧ: ಸಚಿವ ಡಾ.ಶರಣಪ್ರಕಾಶ ಪಾಟೀಲ್



**ಸೇಡಂ , ಏ ,29:** ಗ್ರಾಮೀಣ ಭಾಗದ ಕಚ್ಚಾ ರಸ್ತೆಗಳನ್ನು ಡಾಂಬರೀಕರಣಗೊಳಿಸಿ, ಗಡಿ ಭಾಗದ ಹೆದ್ದಾರಿಗಳಿಗೆ ನೇರ ಸಂಪರ್ಕ ಕಲ್ಪಿಸುವ ಮೂಲಕ ಸಾರಿಗೆ ವ್ಯವಸ್ಥೆಯನ್ನು ಸುಗಮಗೊಳಿಸುವ ಮೂಲಕ ಗ್ರಾಮೀಣ
ರಸ್ತೆಗಳ ಕಾಯಕಲ್ಪಕ್ಕೆ ಸರ್ಕಾರ ಬದ್ಧವಾಗಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ್ ಊಡಗಿ ಹೇಳಿದರು.

ತಾಲೂಕಿನ ಮದನಾ ಗ್ರಾಮದಲ್ಲಿ 2025–26ನೇ ಸಾಲಿನ ಮುಖ್ಯಮಂತ್ರಿಯವರ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ತಾಲೂಕಿನ ರಾಜ್ಯ ಹೆದ್ದಾರಿ SH – 27 ಮುಧೋಳ–ಎಲಗೇರಾ ಆಂಧ್ರ ಪ್ರದೇಶ ಗಡಿವರೆಗೆ 9.26 ಕಿಮೀದಿಂದ 13.86ವರೆಗೆ ರಸ್ತೆ ಸುಧಾರಣೆಯ 995 ಲಕ್ಷ ರೂ.ಗಳ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು ರಾಜ್ಯದ ಕಟ್ಟಕಡೆಯ ಹಳ್ಳಿಯ ರಸ್ತೆಯೂ ರಾಷ್ಟ್ರೀಯ ಹೆದ್ದಾರಿಯಷ್ಟೇ ಸುಗಮವಾಗಿರಬೇಕು ಎಂಬುದು ಸರ್ಕಾರದ ಗುರಿಯಾಗಿದ್ದು, ವಿಶೇಷವಾಗಿ ಗಡಿ ಭಾಗಗಳಲ್ಲಿನ ರಸ್ತೆ ಸಂಪರ್ಕ ಜಾಲವನ್ನು ಬಲಪಡಿಸಲು ನಾವು ಬದ್ಧರಾಗಿದ್ದೇವೆ ಎಂದರು.


ಈ ವೇಳೆಯಲ್ಲಿ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಬಸವರಾಜ ಪಾಟೀಲ ಊಡಗಿ, ಕಾರ್ಮಿಕ ಸಂಘದ ಅಧ್ಯಕ್ಷ ಸತೀಶ್ ರೆಡ್ಡಿ ರಂಜೋಳ್, ಎಪಿಎಂಸಿ ಮಾಜಿ ಅಧ್ಯಕ್ಷ ಗುರುನಾಥ್ ರೆಡ್ಡಿ ಪಾಟೀಲ್ ಹೂಡಾ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಲೋಕೋಪಯೋಗಿ ಇಲಾಖೆಯ ಉಪ ವಿಭಾಗದ ಎಇಇ ಶಿವಶರಣಬಿ ಜೇವರ್ಗಿ, ಗುತ್ತಿಗೆದಾರರಾದ ಸಿದ್ದಪ್ಪಗೌಡ ಪಾಟೀಲ್ ಯಾದಗಿರಿ, ನಾಗೇಂದ್ರಪ್ಪ ಸಾಹುಕಾರ, ಗ್ಯಾರೆಂಟಿ ಸದಸ್ಯರಾದ ಮೆಹಮ್ಮದ್ ಮದನ, ವೆಂಕಟಪ್ಪ ಜೋಗಿ ಸೇರಿದಂತೆ ಅನೇಕರು ಇದ್ದರು.

# ಚಿಟ್ಟಿನಾಡು ಸಿಮೆಂಟ್ ಖರೀದಿ ಮಾಡಿದ ಗೋಮಾಳ ಜಮೀನು ರಕ್ಷಣೆ ಮಾಡಿ ಕಲ್ಲೂರ ರೋಡ ಗ್ರಾಮಸ್ಥರ ಆಗ್ರಹ



**ಚಿಂಚೋಳಿ:ಏ.29:** ತಾಲ್ಲೂಕಿನ, ಕಲ್ಲೂರ ರೋಡ ಗ್ರಾಮದಲ್ಲಿರುವ ಸರಕಾರಿ ಗೋಮಾಳ ಜಮೀನು
ಮೆ: ಚಿಟ್ಟಿನಾಡು ಸಿಮೆಂಟ್ ರವರು ಖರೀದಿ ಮಾಡಿರುವುದರಿಂದ ಅವರು ಬೇರೆ ಕಡೆ ಗೋಮಾಳ
ಉದ್ದೇಶಕ್ಕಾಗಿಕಲ್ಲೂರ ರೋಡ ಗ್ರಾಮದ ಸರಕಾರಿ ಗೋಮಾಳ ಜಮೀನು (1) ಸ.ನಂ. 51 ವಿಸ್ತೀರ್ಣ 11–22 (ಎ–ಗುಂ), (2) ಸ.ನಂ. 55/1 ವಿಸ್ತೀರ್ಣ 05–04 (ಎ–ಗುಂ), (3) ಸ.ನಂ. 55/2 ವಿಸ್ತೀರ್ಣ 05–03 (ಎ– ಗುಂ), (4) ಸ.ನಂ. 55/3 ವಿಸ್ತೀರ್ಣ 06–00 (ಎ–ಗುಂ), (5) ಸ.ನಂ. 56/1 ವಿಸ್ತೀರ್ಣ 07–07 (ಎ–ಗುಂ) (6) ಸ.ನಂ. 56/2 ವಿಸ್ತೀರ್ಣ 03–21 (ಎ–ಗುಂ), (8) ಸ.ನಂ. 56/3 ವಿಸ್ತೀರ್ಣ 05–00 (ಎ–ಗುಂ) (9) ಸ.ನಂ. 56/4 ವಿಸ್ತೀರ್ಣ 02–06 (ಎ–ಗುಂ) ಹಾಗೂ (10) ಸ.ನಂ. 56/5 ವಿಸ್ತೀರ್ಣ 03–25 (ಎ–ಗುಂ) ಒಟ್ಟು ಕ್ಷೇತ್ರ 49–08 (ಎ–ಗುಂ) ಜಮೀನು ಖರೀದಿಸಿ ಕೊಟ್ಟಿರುತ್ತಾರೆ, ಅದರಂತೆ ಕಂದಾಯ ದಾಖಲಾತಿಗಳಲ್ಲಿ ಸರಕಾರಿ ಗೋಮಾಳ' ಹೆಸರಿನಿಂದ ಹಕ್ಕು ವರ್ಗಾವಣೆಯಾಗಿದ್ದು, ಪಹಣಿ ಪತ್ರಿಕೆ ಮತ್ತು ಮ್ಯುಟೇಶನ್ ಪತ್ರಿಕೆಯಲ್ಲಿ ಸ್ಪಷ್ಟವಾಗಿ ನಮೂದಾಗಿರುತ್ತದೆ ನಮ್ಮ ಗ್ರಾಮದ ಎಲ್ಲಾ ರೈತರ ದನ–ಕರುಗಳು, ಪಶುಗಳು ಕುರಿ–ಮೇಕೆಗಳು ಪ್ರತಿ ದಿವಸ ಇದೇ ಸರಕಾರಿ ಗೋಮಾಳ ಜಮೀನಿನಲ್ಲಿ ಮೇಯುತ್ತಾ ಬರುತ್ತಿವೆ ಆದರೆ ಇತ್ತೀಚೆಗೆ ನೆರೆಯ ತೆಲಂಗಾಣಾದ ಹೈದ್ರಾಬಾದ ಮೂಲದ ಭೂಮಾಫಿಯಾ ನಮ್ಮ
ಕಲ್ಲೂರ ರೋಡ ಗ್ರಾಮಕ್ಕೆ ಬಂದು ಸ್ಥಳೀಯರ ಸಹಾಯ ಮತ್ತು ಸಹಕಾರ ಪಡೆದುಕೊಂಡು, ಮೇಲೆ ತೋರಿಸಿದ ಸಂಪೂರ್ಣ ಗೋಮಾಳ ಒಟ್ಟು ವಿಸ್ತೀರ್ಣ 49–08 (ಎ–ಗುಂ) ಜಮೀನು ಕಾನೂನು ಬಾಹಿರವಾಗಿ ಕಟ್ಟಿ
ಮಾಡಿಕೊಂಡು, ಅದರ ಸುತ್ತಲು ತಂತಿ–ಬೇಲಿ ನಿರ್ಮಿಸಿಕೊಂಡು, ಅದರಲ್ಲಿ ವ್ಯವಸಾಯ ಮಾಡುವ
ಉದ್ದೇಶಕ್ಕಾಗಿ ಅಭಿವೃದ್ಧಿ ಕೆಲಸ ಮಾಡುತ್ತಿದ್ದಾರೆ ಸದರಿ ಗೋಮಾಳ ಜಮೀನಿಗೆ ಸುತ್ತಲು ತಂತಿ–ಬೇಲಿ ನಿರ್ಮಿಸಿದರಿಂದ, ನಮ್ಮ ಗ್ರಾಮದ
ರೈತರ ದನ–ಕರುಗಳು, ಪಶುಗಳು ಕುರಿ–ಮೇಕೆಗಳು ಸದರಿ ಜಮೀನಿನೊಳಗೆ ಮೇಯಲು ಬಿಡುತ್ತಿಲ್ಲ, ಇದರಿಂದ ಜಾನುವಾರುಗಳು ಬೇರೆಯವರ ಜಮೀನಿನೊಳಗೆ ಹೋಗಿ ಬೆಳೆ ತಂದು ಹಾಳು ಮಾಡುತ್ತಿವೆ ಆಗಿರುತ್ತದೆ, ನೀವು ಮತ್ತು ನಿಮ್ಮ ಜಾನುವಾರುಗಳು ಈ ಕಡೆ ಸೂಳಿಯುವಂತ್ತಿಲ್ಲ, ಇಂದಿನಿಂದ ಈ ಜಮೀನು ಸದರಿ ಭೂಮಾಫಿಯಾ ರವರು "ಈ ಗೋಮಾಳ ಜಮೀನು ಈಗ ನಮ್ಮ ಸ್ವಂತ ಆಸ್ತಿ ನಮ್ಮ ಸ್ವಂತ ಆಸ್ತಿಯಾಗಿರುತ್ತದೆ, ಇನ್ನೊಮ್ಮೆ ನಿಮ್ಮ ಜಾನುವಾರುಗಳು ಈ ಜಮೀನಿಗೆ ಬಂದರೆ ಜಾನುವಾರುಗಳು ಮರಳಿ ನಿಮಗೆ ಸಿಗುವುದಿಲ್ಲ" ಎಂದು ಹೆದರಿಸುತ್ತಿದ್ದಾರೆ ರೈತರ ಜಮೀನು ಕೂಡ ಕಬ್ಬೆ ಮಾಡಿಕೊಳ್ಳುವ ಸಾಧ್ಯತೆಯಿದೆ ಸಹಕಾರ ಪಡೆದುಕೊಂಡು ಈ ಕಾನೂನು ಬಾಹಿರ ಕೆಲಸ ಮಾಡುತ್ತಿದ್ದಾರೆ. ಹಾಗೆಯೇ ಬಿಟ್ಟಿದಲ್ಲಿ ಅಕ್ಕ–ಪಕ್ಕದ
ಸದರಿ ಭೂಮಾಫಿಯಾ ರವರು ಬೇರೆ ಉದ್ದೇಶ ಇಟ್ಟುಕೊಂಡು, ಸ್ಥಳೀಯರ ಸಹಾಯ ಮತ್ತು
ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಂಡು, ಕಬ್ಬೆ ಮಾಡಿರುವ ಸರಕಾರಿ ಗೋಮಾಳ ಜಮೀನು
ಬಂದು ಪರಿಶೀಲನೆ ಮಾಡಿ, ಸದರಿ ಭೂಮಾಫಿಯಾ ಮತ್ತು ಅವರಿಗೆ ಸ್ಥಳೀಯರು ಕೊಡುತ್ತಿರುವವರ ವಿರುದ್ಧ
ಆದ್ದರಿಂದ, ಈ ನಮ್ಮ ಮನವಿ ಅರ್ಜಿಯನ್ನು ಪರಿಗಣಿಸಿ, ತಾವುಗಳು ಮೋಖಾದ ಮೇಲೆ
ಬಿಡಿಸಿಕೊಡಬೇಕೆಂದು ಮತ್ತು ಮುಂದೆ ಭವಿಷ್ಯದಲ್ಲಿ ಯಾರು ಕಟ್ಟೆ ಮಾಡದಂತೆ ನಿಟ್ಟುನಿಟ್ಟಿನ ಕ್ರಮ
ಕೈಗೊಳ್ಳಬೇಕೆಂದು ಚಿಂಚೋಳಿ ತಹಸಿಲ್ದಾರ್ ಸುಬ್ಬಣ್ಣ ಜಮಖಂಡಿ, ಅವರಿಗೆ ಕಲ್ಲೂರ ರೋಡ ಗ್ರಾಮದ ಮುಖಂಡರು ಮನವಿ ಪತ್ರವನ್ನು ನೀಡಿದರು ಈ ಸಂದರ್ಭದಲ್ಲಿ ಕಲ್ಲೂರ ರೋಡ ಗ್ರಾಮದ ಮುಖಂಡರಾದ ಸುಧಾಕರ್ ಪಾಟೀಲ್, ಚನ್ನು ಬೋಯಿನ್,ಯಶವಂತ ಖೋಪಡೆ, ಚನ್ನು ಧಬಾ, ಜಗನಾಥ್ ನಾಟೆಕಾರ್, ಭಕೇಶಮ್ ಕೊಂಚರ್, ಜಗು ಗೌಡ್ಸ್, ಅಂಜಪ್ಪ ಪೂಜಾರಿ, ರಮೇಶ್ ಉರಾಡಿ, ಸೈಬಣ್ಣ ಪೂಜಾರಿ, ಅನೀಲ್ ಕುಮಾರ್ ಕಂಟ್ಲಿ, ಜನಾರ್ಧನ್ ಪೂಜಾರಿ, ರವಿಕುಮಾರ್ ಪೂಜಾರಿ, ಚೆಟ್ಟಿನಾಡ್ ಸಿಮೆಂಟ್ ಕಂಪನಿಯ ಸಿಬ್ಬಂದಿಗಳಾದ ಭೇಮರೆಡ್ಡಿ, ಪ್ರಭಾಕರ್ ರೆಡ್ಡಿ, ಅವರು ಇದ್ದರು

# ಜಾಮೀನು ಕೋರಿ ನಟ ದರ್ಶನ್ ಸುಪ್ರೀಂಗೆ ಮೊರೆ



**ಬೆಂಗಳೂರು,ಏ.29–** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ನಟ ದರ್ಶನ್ ಜಾಮೀನು ಕೋರಿ ಸುಪ್ರೀಂಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದಾರೆ.ಸಾಕ್ಷ್ಯ ವಿಚಾರಣೆ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಜಾಮೀನು ಕೋರಿ ನಟ ದರ್ಶನ್ ಅರ್ಜಿಯಲ್ಲಿ ಮನವಿ ಮಾಡಿದ್ದಾರೆ.ಕಳೆದ ಏ.14 ರಂದೇ ನಟ ದರ್ಶನ್ ಅವರು ಸುಪ್ರೀಂಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದಾರೆ. ಸಾಕ್ಷಿಗಳ ವಿಚಾರಣೆ ಪ್ರಕ್ರಿಯೆ ವಿಳಂಬವಾಗುತ್ತಿದೆ ಎಂಬ ಕಾರಣವನ್ನು ಮುಂದಿಟ್ಟುಕೊಂಡು ಈ ಬಾರಿ ಸುಪ್ರೀಂ ಕೋರ್ಟ್‌ನಲ್ಲಿ ಜಾಮೀನು ಕೋರಲಾಗಿದೆ. ಕಳೆದ ಏಪ್ರಿಲ್ 14 ರಂದೇ ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಮೇಲ್ಮನವಿ ಅರ್ಜಿ ಸಲ್ಲಿಕೆಯಾಗಿದೆ.ಈ ಹಿಂದೆ ಕರ್ನಾಟಕ ಹೈಕೋರ್ಟ್‌ನಲ್ಲಿ ಜಾಮೀನು ಅರ್ಜಿ ತಿರಸ್ಕೃತಗೊಂಡಿದ್ದರಿಂದ, ಇದೀಗ ದೇಶದ ಅತ್ಯುನ್ನತ ನ್ಯಾಯಾಲಯದ ಮೊರೆ ಹೋಗಿದ್ದಾರೆ.

ಮುಂದಿನ ಹಂತವೇನು? ಸಾಮಾನ್ಯವಾಗಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಕೆಯಾದ ನಂತರ, ಅದು ವಿಚಾರಣೆಗೆ ಪಟ್ಟಿಯಾಗಲು ಕೆಲವು ದಿನಗಳ ಸಮಯ ತೆಗೆದುಕೊಳ್ಳುತ್ತದೆ. ನ್ಯಾಯಪೀಠವು ಈ ಅರ್ಜಿಯನ್ನು ಕೈಗೆತ್ತಿಕೊಂಡಾಗ, ತನಿಖಾ ಸಂಸ್ಥೆಗಳಿಗೆ ನೋಟಿಸ್ ನೀಡಿ ಅವರ ಅಭಿಪ್ರಾಯವನ್ನೂ ಕೇಳುವ ಸಾಧ್ಯತೆಯಿದೆ.

# ಒಲಂಪಿಕ್ ನಲ್ಲಿ ಬಳ್ಳಾರಿ ಮಕ್ಕಳು ಪ್ರಜ್ವಲಿಸಬೇಕು: ಸೋಮಶೇಖರ ರೆಡ್ಡಿ.

**ಬಳ್ಳಾರಿ, ಏ.28:** ನಗರದ ಕ್ರೀಡಾಂಗಣದಲ್ಲಿ ಕ್ರೀಡಾ ಇಲಾಖೆಯ ಸಹಯೋಗದೊಂದಿಗೆ ಬಳ್ಳಾರಿ ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಷನ್ ಏ.8 ರಿಂದ 28 ರ ವರೆಗೆ 22 ದಿನಗಳ ಕಾಲ ನಡೆದ ಕ್ರೀಡಾ ಪ್ರತಿಭೆಗಳ ಹುಡುಕಾಟದ ಉಚಿತ ಅಥ್ಲೆಟಿಕ್ ತರಬೇತಿಯ ಬೇಸಿಕ್ ಶಿಬಿರದ ಸಮಾರೋಪ ಸಮಾರಂಭ ಇಂದು ನಡೆಯಿತು.

ನಾಲ್ಕು ನೂರಕ್ಕೂ ಹೆಚ್ಚು ಮಕ್ಕಳಿಗೆ ಬೇಸಿಗೆಯ ರಜೆ ದಿನಗಳಲ್ಲಿ ಪ್ರತಿದಿನ ಬೆಳಿಗ್ಗೆ 6.30 ರಿಂದ 8.30 ಸಂಜೆ 5 ರಿಂದ 7 ವರೆಗೆ ತರಬೇತಿ ನೀಡಲಾಗಿದೆ.ಮುಖ್ಯವಾಗಿ ಈ ಶಿಬಿರದಲ್ಲಿ ಫಿಜಿಕಲ್ ಫಿಟ್ ನೆಸ್ ರನ್ನಿಂಗ್ ಮತ್ತು ಲಾಂಗ್ ಜಂಪ್ ತರಬೇತಿ ನೀಡಿದೆ.
400 ಕ್ಕೂ ಹೆಚ್ಚು ಮಕ್ಕಳು ಪಾಲ್ಗೊಂಡಿದ್ದರು. ಇವರಿಗೆ ತರಬೇತಿ ನೀಡಿ ಬೇಸಿಕ್ ತರಬೇತಿಯಲ್ಲಿ ಸ್ಪರ್ಧೆ ನಡೆಸಿ 92 ಮಕ್ಕಳನ್ನು ಆಯ್ಕೆ ಮಾಡಿದ್ದು ಇವರಿಗೆ ಮೇ. 1 ರಿಂದ ಒಂದು ತಿಂಗಳಕಾಲ ತರಬೇತಿ ನೀಡಲಿದೆ.
ಮುಂದಿನ ತರಬೇತಿಗೆ ಆಯ್ಕೆ ಮಾಡಿದ ಮಕ್ಕಳಿಗೆ ನಗರದ ಮಾಜಿ ಶಾಸಕ .ಜಿ.ಸೋಮಶೇಖರ ರೆಡ್ಡಿ ಮೆಡಲ್ ಗಳನ್ನು ವಿತರಿಸಿದರು.
ಈ ವೇಳೆ ಮಾತನಾಡಿದ ಅವರು. ನಾವು ಸಹ ಚಿಕ್ಕ ಮಕ್ಕಳಿಂದಲೇ ತರಬೇತಿ ನೀಡಿದರೆ ಚೈನ, ರಷ್ಯಾ, ಜರ್ಮನಿ ಮೊದಲಾದ ದೇಶಗಳಂತೆ ನಮ್ಮ ದೇಶದ ಮಕ್ಕಳು ಒಲಂಪಿಕ್ ಮೆಡಲ್ ಗಳನ್ನು ತರಬಹುದು ಅದಕ್ಕೆ ಇಂತಹ ಶಿಬಿರಗಳು ಸಹಕಾರಿಯಾಗಲಿವೆ. ಒಲಂಪಿಕ್ ನಲ್ಲಿ ನಮ್ಮ ಮಕ್ಕಳು ಉತ್ತಮ ತರಬೇತಿ ಪಡೆದು ಪ್ರಜ್ವಲಿಸಬೇಕು ಎಂದರು.

ಬಳ್ಳಾರಿಯಲ್ಲಿ ಕ್ರೀಡಾಂಗಣಗಳು ಇವೆ ಆದರೆ ಕೋಚ್ ಗಳ ಕೊರತೆ ಇದೆ. ಕ್ರೀಡೆಯನ್ನು ಪ್ರೋತ್ಸಾಹಿಸಲು ಡಿಎಂಎಫ್ ಮತ್ತು ಕೆಎಂಇಆರ್ ಸಿ ನಿಧಿಯ ಹಣವನ್ನು ಬಳಸಿಕೊಂಡು ಉತ್ತಮ ಸೌಲಭ್ಯ ಒದಗಿಸಬೇಕಿದೆ.ಬಳ್ಳಾರಿಯಲ್ಲಿ ಅಂತರ ರಾಷ್ಟ್ರೀಯ ಮಟ್ಟದ ಕ್ರಿಕೆಟ್ ಸ್ಟೇಡಿಯಂ ಮಾಡುವ ಆಶಯ ಇದೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಳ್ಳಾರಿ ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಷನ್ ಅಧ್ಯಕ್ಷ ಡಾ.ರವಿಶಂಕರ್ , ಮಕ್ಕಳಲ್ಲಿ ಕ್ರೀಡಾ




ಪ್ರತಿಭೆ ಇರುತ್ತೆ ಅದನ್ನು ಹುಡುಕಿ ಪ್ರೋತ್ಸಾಹಿಸಿದರೆ ಅವರು ಒಳ್ಳೆಯ ಕ್ರೀಡಾ ಸಾಧನೆ ಮಾಡಬಲ್ಲರು. ಅದಕ್ಕಾಗಿ ಈ ಶಿಬಿರ ಆಯೋಜಿಸಿತ್ತು ಎಂದರು.

ಪೋಷಕರಾದ ಸಂದ್ಯಾ, ಸುಮ, ಪ್ರವೀಣ್, ಜೀನತ್ ಅವರು ಸಂಜೆವಾಣಿ ಜೊತೆ ಮಾತನಾಡಿ, ಈ ಬೇಸಿಗೆ ರಜೆಯಲ್ಲಿ ಮಕ್ಕಳಿಗೆ ಎರೆಡು ತಿಂಗಳ ಕಾಲ ಉಚಿತವಾಗಿ ಕ್ರೀಡಾ ತರಬೇತಿ ನೀಡುತ್ತಿರುವುದು ಬಳ್ಳಾರಿ ಜನತೆಂಯ ಪಾಲಿಗೆ ಹರ್ಷದಾಯಕವಾದ ವಿಷಯ, ನಮಗಂತೂ ತುಂಬಾ ಖುಷಿಯಾಗಿದೆ. ಪ್ರತಿನಿತ್ಯ ಮಕ್ಕಳ ದೈಹಿಕ ಕಸರತ್ತು ಅವರ ದೈಹಿಕ ಬೆಳವಣಿಗೆ ಜೊತೆಗೆ ಮಾನಸಿಕ ಬೆಳವಣಿಗೆಗೂ ಸಹಕಸರಿಯಾಗಲಿದೆಂದರು.

ತರಬೇತಿ ಪಡೆದ ಮಕ್ಕಳಾದ ಲಾಶ್ಯಪ್ರಿಯೆ, ಜನನಿ, ಗೌತಮ್ ಕುಮಾರ್ ಮಾತನಾಡಿ, ಈ ಶಿಬಿರಕ್ಕೆ ಬಂದ ಮೇಲೆ ನನ್ನಲ್ಲಿ ಡಿಸಿಪ್ಲೇನ್ ಹೆಚ್ಚಿದೆ, ಈ ಮೊದಲು ನಾನು ಸ್ವಲ್ಪ ಓಡಿದರೆ ಸುಸ್ತು ಆಗುತ್ತಿತ್ತು ಓಗ ಚೆನ್ನಾಗಿ ಓಡುತ್ತೇನೆ ಎಂದರು.

ತರಬೇತುದಾರರಾದ ಬಾಲು ಮತ್ತು ಸಂತೋಷ್ ಅವರು ಕೋಚಿಂಗ್ ನೀಡಿದ್ದಾರೆ. ಶ್ರಾವಣಿ ಅವರು ಕಾರ್ಯಕ್ರಮ ನಿರೂಪಿಸಿದರು
ಅಥ್ಲಟಿಕ್ ಅಸೋಸಿಯೇಷನ್ ಉಪಾಧ್ಯಕ್ಷೆ ಡಾ. ಅನುರಾಧ, ಪಾಲಿಕೆ ಸದಸ್ಯ ಗೋವಿಂದರಾಜುಲು, ಕಾಂಗ್ರೆಸ್ ಮುಖಂಡ ಪಿ. ಜಗನ್ನಾಥ ಮೊದಲಾದವರು ಇದ್ದರು.

# ಪ್ರೊ. ಅಬ್ದುಲ್ ರಬ್ ಉಸ್ತಾದ್ ಉರ್ದು ಗಜಲ್‌ಗಳು ವಿದ್ಯಾರ್ಥಿಗಳಿಗೆ ಪ್ರೇರಣೆ



**ಕಲಬುರಗಿ :ಏ.29:** ಉರ್ದು ಸಾಹಿತ್ಯದಲ್ಲಿ ಅಪಾರ ಪಾಂಡಿತ್ಯ ಗಳಿಸಿರುವ ಉರ್ದು ಅಧ್ಯಯನ ವಿಭಾಗದ ಮುಖ್ಯಸ್ಥ ಹಾಗೂ ಹಿರಿಯ ಪ್ರಾಧ್ಯಾಪಕ ಪ್ರೋ. ಅಬ್ದುಲ್ ರಬ್ ಉಸ್ತಾದ್ ಮೃದು ಸ್ವಭಾವದ ವ್ಯಕ್ತಿತ್ವದವರು. ಅತ್ಯಂತ ಸರಳ ಜೀವಿ ಮತ್ತು ಭಾವಜೀವಿಯಾಗಿದ್ದಾರೆ. ವಿಶ್ವವಿದ್ಯಾಲಯದ ಅಭ್ಯುದಯಕ್ಕೆ ಇವರು ಸಲ್ಲಿಸಿರುವ ಸುದೀರ್ಘ ಸೇವೆಯನ್ನು ವಿಶ್ವವಿದ್ಯಾಲಯ ಸ್ಮರಿಸುತ್ತದೆ ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೋ ಶಶಿಕಾಂತ್ ಎಸ್. ಉಡಿಕೇರಿ ಅಭಿಪ್ರಾಯಪಟ್ಟರು.
ಗುಲಬರ್ಗಾ ವಿಶ್ವವಿದ್ಯಾಲಯದ ಹರಿಹರ ಸಭಾಂಗಣದಲ್ಲಿ ಕಲಾ ನಿಕಾಯದ ಉರ್ದು ಮತ್ತು ಪರ್ಷಿಯನ್ ಅಧ್ಯಯನ ವಿಭಾಗದ ಮುಖ್ಯಸ್ಥ ಹಾಗೂ ಹಿರಿಯ ಪ್ರಾಧ್ಯಾಪಕ ಪ್ರೋ. ಅಬ್ದುಲ್ ರಬ್ ಉಸ್ತಾದ್ ಅವರ ವಯೋನಿವೃತ್ತಿ ನಿಮಿತ್ತ ಆಯೋಜಿಸಿದ ಅಭಿನಂದನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿ ಕಠಿಣ ಪರಿಶ್ರಮದಿಂದ ಶಿಕ್ಷಣ ಪಡೆದು ಶಿಕ್ಷಕರಾಗಿ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ನೀಡಿದ್ದಾರೆ. ಶಿಕ್ಷಕರಿಗೆ ನಿಜವಾದ ಸಂಪತ್ತು ವಿದ್ಯಾರ್ಥಿಗಳೇ ವಿನಃ ಹಣ ಮತ್ತು ಆಸ್ತಿಯಲ್ಲ. ಗುರುವಿನಿಂದ ಗಳಿಸಿದ ಶ್ರೇಯಸ್ಸನ್ನು ವಿದ್ಯಾರ್ಥಿಗಳು ಸದಾ ಸ್ಮರಿಸಿಕೊಳ್ಳಬೇಕು ಎಂದರು.
ಕಲಾ ನಿಕಾಯದ ಡೀನ್, ಹಂಗಾಮಿ ಕುಲಪತಿಯಾಗಿ ನ್ಯಾಕ್ ಸಮಿತಿ, ವಿವಿಧ ಶೈಕ್ಷಣಿಕ ಚಟುವಟಿಕೆಗಳಲ್ಲಿ ಕಾಳಜಿಯಿಂದ ಕರ್ತವ್ಯ ನಿರ್ವಹಿಸಿರುವ ಪ್ರೊ. ಅಬ್ದುಲ್ ರಬ್ ಅತ್ಯುತ್ತಮ ಬೋಧನೆ, ಸಾಹಿತ್ಯ ಜ್ಞಾನ, ಗಜಲ್ ರಚನೆಯಿಂದ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಪ್ರಾವೀಣ್ಯತೆ ಸಾಧನೆ ವಿದ್ಯಾರ್ಥಿಗಳಿಗೆ ಪ್ರೋತ್ಸಾಹದಾಯಕ. ಜೀವನದ ಏರು–ಪೇರು, ಒಳಿತು–ಕೆಡುಕು ಮತ್ತು ಟೀಕೆಗಳನ್ನು ಸಕಾರಾತ್ಮಕವಾಗಿ ಸ್ವೀಕರಿಸುವ ಇವರ ತಾಳ್ಮೆ ಮತ್ತು ಸಹನೆ ಗುಣ ಇತರರಿಗೆ ಮಾದರಿ. ಉರ್ದು ಮತ್ತು ಪರ್ಷಿಯನ್ ಭಾಷಾ ಸಾಹಿತ್ಯ ಜ್ಞಾನವನ್ನು ವಿದ್ಯಾರ್ಥಿಗಳಿಗೆ ಧಾರೆಯೆರೆದಿರುವ ಇವರ ಸೇವೆ ಮತ್ತು ವ್ಯಕ್ತಿತ್ವವನ್ನು ಪ್ರಶಂಸಿಸಿದರು.
ಗುಲಬರ್ಗಾ ವಿಶ್ವವಿದ್ಯಾಲಯದ ಕುಲಸಚಿವ ಪ್ರೋ. ರಮೇಶ ಲಂಡನಕರ್ ಮುಖ್ಯ ಅತಿಥಿಯಾಗಿ ಮಾತನಾಡಿ ಉರ್ದು ಗಜಲ್ ಸಾಹಿತ್ಯದಲ್ಲಿ ಅಪಾರ ಸಾಧನೆ ಮಾಡಿರುವ ಡಾ. ಅಬ್ದುಲ್ ರಬ್ ಉಸ್ತಾದ್ ಉತ್ತಮ ನಡೆ–ನುಡಿ ವ್ಯಕ್ತಿ. ನಗುಮುಖದಿಂದ ಶಾಯರಿ ಹೇಳುತ್ತಾ ನಗಿಸುವ ಇವರು ಎಲ್ಲರನ್ನು ಕಾಳಜಿ, ಸಹೋದರತೆಯಿಂದ ಕಂಡಿದ್ದಾರೆ. ಒಳ್ಳೆಯ ಸಹದ್ಯೋಗಿ ಮತ್ತು ಪೋಷಕರು ಸಿಗುವುದು ಅಪರೂಪ. ಪ್ರೊ. ರಬ್ ನಿವೃತ್ತಿವರೆಗಿನ ಗೆಳೆತನ, ಬಾಂದವ್ಯ ಎಂದಿಗೂ ಮರೆಯಲು ಸಾಧ್ಯವಿಲ್ಲವೆಂದು ಸ್ಮರಿಸಿದರು.
ಗುಲಬರ್ಗಾ ವಿಶ್ವವಿದ್ಯಾಲಯದ ಆಡಳಿತ ವಿಶೇಷಾಧಿಕಾರಿ ಪ್ರೋ. ರಮೇಶ ರಾಠೋಡ ಮಾತನಾಡಿ ಪ್ರೊ. ಅಬ್ದುಲ್ ರಬ್ ಉಸ್ತಾದ್ ಹಿರಿಯರು ಮತ್ತು ಕಿರಿಯರನ್ನು ಸಮಾನವಾಗಿ ಕಂಡಿದ್ದಾರೆ. ಉರ್ದು ಗಜಲ್‌ಗಳನ್ನು ಕನ್ನಡಕ್ಕೆ ಅನುವಾದಿಸಿದ್ದಾರೆ. ಶಾಯರಿ ಹೇಳುವುದು ಮತ್ತು ಗಜಲ್ ಬರವಣಿಗೆ ಮೂಲಕ ಅಂತರ ರಾಷ್ಟ್ರೀಯ ಖ್ಯಾತಿ ಪಡೆದಿರುವ ಇವರ ನಿವೃತ್ತಿ ಜೀವನ ಸುಖಕರವಾಗಿರಲಿ. ಉರ್ದು ಸಾಹಿತ್ಯ ಸೇವೆ ಮುಂದುವರೆಸಲೆಂದು ಆಶಿಸಿದರು.
ಕಲಾ ನಿಕಾಯದ ಡೀನರು ಹಾಗೂ ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೋ. ಎಚ್.ಟಿ. ಪೋತೆ ಅಧ್ಯಕ್ಷತೆ ವಹಿಸಿ ಮಾತನಾಡಿ ಡಾ. ಅಬ್ದುಲ್ ರಬ್ ಉಸ್ತಾದ ಮಗುವಿನಂತ ಮನಸ್ಸು. ಜೀವನದ ಕಷ್ಟ, ಕಾರ್ಪಣ್ಯ, ನೋವು, ಅಪಮಾನ ಅನುಭವ ಮನಸ್ಸಿನಲ್ಲಿದ್ದರೂ ಎಲ್ಲರೊಡನೆ ಸಂತಸದಿಂದ ಬೆರೆತು ನಗುವಿನ ಸವಿ ಹಂಚಿದರು. ಕಷ್ಟದಲ್ಲಿರುವವರನ್ನು ಕರುಳಬಳ್ಳಿಯಂತೆ ಅಪ್ಪಿಕೊಂಡು ಸಹಾಯಹಸ್ತ ನೀಡಿದ್ದಾರೆ. ಸದಾ ನಗು ಚೆಲ್ಲುವ ಮೂಲಕ ಟೀಕೆ ಮತ್ತು ವಿರೋಧಗಳನ್ನು ಮುಕ್ತವಾಗಿ ಸ್ವೀಕರಿಸಿದ್ದಾರೆ. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಹೃದಯತೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಿದ್ದಾರೆ. ಅವರ ನಿವೃತ್ತಿ ಜೀವನ ಸಂತಸದಿಂದ ಕೂಡಿರಲಿ ಎಂದರು.

ಇಂಗ್ಲೀಷ್ ವಿಭಾಗದ ಮುಖ್ಯಸ್ಥ ಡಾ. ನಿಂಗಣ್ಣ ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜೂರ್ ಅಹಮದ್ ದಖನಿ, ಡಾ. ತಾತ್ಯರಾವ್, ಡಾ. ಶಿವಶರಣಪ್ಪ ಕೂಡ್ಲಿ, ಡಾ. ಆನಂದ್ ಮೇಟಿ, ಡಾ. ಸೂಲಬಾಯಿ ಅನಿಸಿಕೆ ಹಂಚಿಕೊಂಡರು. ಡಾ. ಶ್ರೀಶೈಲ ನಾಗರಾಳ, ಡಾ. ಸೂರ್ಯಕಾಂತ್ ಸುಜ್ಯಾತ್, ಬೋಡೇರಿಯಾಜ್ ಅಹಮದ್, ಪ್ರೊ. ಅಬ್ದುಲ್ ರಬ್ ಉಸ್ತಾದ್ ಕುಟುಂಭ ವರ್ಗದವರು, ನಾಗರೀಕರು, ಕಲಾ ನಿಕಾಯದ ವಿವಿಧ ವಿಭಾಗಗಳ ಅತಿಥಿ ಉಪನ್ಯಾಸಕರು, ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿಗಳು ಭಾಗವಹಿಸಿದ್ದರು. ಸಂಗೀತ ವಿಭಾಗದ ಶ್ರೀಮತಿ ಭುವನೇಶ್ವರಿ ಮತ್ತು ಸಿದ್ದಾರ್ಥ ಚಿಮ್ಮಾ ಇದ್ಲಾಯಿ ಗಜಲ್ ಗಾಯನ ಪ್ರಸ್ತುತಪಡಿಸಿದರು. ಡಾ. ಆಕಾಶ್ ಅತಿಥಿ ಗಣ್ಯರನ್ನು ಸ್ವಾಗತಿಸಿದರು. ಡಾ. ಶಿವಾನಂದ ಕಡಗಂಚಿ ಕಾರ್ಯಕ್ರಮ ನಿರ್ವಹಿಸಿದರು. ಡಾ. ಸಂತೋಷ ಕುಂಬಾರ ವಂದಿಸಿದರು. ಡಾ. ಎಂ.ಬಿ. ಕಟ್ಟಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಸಂಯೋಜಿಸಿದರು.
ಗುರುಗಳ ನೀಡಿದ ಶಿಕ್ಷಣ ನನಗೆ ಮನುಷ್ಯ ಧರ್ಮ ಕಲಿಸಿದೆ. ಗುರುಹಿರಿಯರ ಕೃಪೆಯಿಂದ ಶಿಕ್ಷಕ ವೃತ್ತಿ ನನಗೆ ಸಂಸ್ಕೃತಿ ಮತ್ತು ಸಂಸ್ಕಾರವನ್ನು ಬೆಳೆಸಿದೆ. ನೈತಿಕತೆ, ಸಭ್ಯತೆ, ಸೊಬಗು ಮತ್ತು ದಕ್ಷತೆ ಇವುಗಳು ಮಾನವ ನಾಗರೀಕತೆಯ ಕನ್ನಡಿಯಾಗಿವೆ. ಮನುಷ್ಯ ಎಂದಿಗೂ ಅಹಂಕಾರ ಪಡಬಾರದು. ಜ್ಞಾನದ ಕೊರತೆಯಿಲ್ಲದ ಜೀವನ ಮನುಷ್ಯತ್ವ ಬೆಳೆಸುತ್ತದೆ. ಬುದ್ಧಿವಂತರು ದುರಾಸೆ ಪಡೆದೆ ಉತ್ತಮ ಕೆಲಸ, ಸಭ್ಯ ನಡತೆ ಮತ್ತು ಮಾನವೀಯತೆ ಮರೆಯಬಾರದು. ನೆಹರು ಅವರು ಹೇಳಿರುವಂತೆ ವಿಶ್ವಜ್ಞಾನ ಮತ್ತು ವಿಶ್ವ ಚಿಂತನೆ ಬೆಳೆಸಿಕೊಂಡರೆ ಎತ್ತರಕ್ಕೆ ಬೆಳೆದು ಶ್ರೇಷ್ಠ ವ್ಯಕ್ತಿಯಾಗಲು ಸಾಧ್ಯವಿದೆ ಎಂದು ತಾವೇ ರಚಿಸಿರುವ ಗಜಲ್ ಶಾಯಿರಿ ಹೇಳಿದರು.
ಪೊ ಅಬ್ದುಲ್ ರಬ್ ಉಸ್ತಾದ್
ಮುಖ್ಯಸ್ಥರು ಹಾಗೂ ಹಿರಿಯ ಪ್ರಾಧ್ಯಾಪಕರು

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE